ವಿಜಯಪುರ | ಸಂಪುಟ 04 | ಸಂಚಿಕೆ 163 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಆಗಸ್ಟ್, 20, 2026

"326 ಬಿಜೆಪಿ ಸಚಿವರಲ್ಲಿ 126 ಸಚಿವರ ವಿರುದ್ಧ ಗಂಭೀರ ಪ್ರಕರಣಗಳಿವೆ. ಅವರ ರಾಜೀನಾಮೆಗೆ ಆಗ್ರಹಿಸದೆ, ನಾನು ಕಾಂಗ್ರೆಸ್‌ನವನು ಮತ್ತು ದಲಿತನಾಗಿರುವುದರಿಂದ ನನ್ನ ರಾಜೀನಾಮೆ ಕೇಳುತ್ತಿದ್ದಾರೆ. ಅವರ ವಿರುದ್ಧ ಅಪಹರಣ, ಕೊಲೆ, ಅತ್ಯಾಚಾರ ಸೇರಿದಂತೆ ಘೋರ ಅಪರಾಧಗಳ ಆರೋಪಗಳಿವೆ."



■ ಬಿ. ನಾಗೇಂದ್ರ
ಯೋಜನೆ, ಕಾರ್ಯಕ್ರಮ ಮೇಲ್ವಿಚಾರಣೆ ಮತ್ತು ಸಾಂಖ್ಯಿಕ ಸಚಿವರು

# ತಮಿಳುನಾಡು ನಾಯಕರು ಒಕ್ಕೂಟ ವ್ಯವಸ್ಥೆ ಗೌರವಿಸಲಿ : ಸಿಎಂ

## ತಮಿಳುನಾಡಿನ ಮಾಜಿ ಸಿಎಂ ಒ.ಪನ್ನೀರಸೆಲ್ವಂ ಹೇಳಿಕೆ ಬಗ್ಗೆ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ತೀವ್ರ ಅಸಮಾಧಾನ

ಬೆಂಗಳೂರು: ಚಾಮರಾಜನಗರ ಜಿಲ್ಲೆಯಲ್ಲಿ ಕೆಲವು ದಿನಗಳ ಹಿಂದೆ ಅರಣ್ಯ ಸಿಬ್ಬಂದಿಯೊಂದಿಗೆ ನಡೆದಿತ್ತು ಎನ್ನಲಾದ ಎನ್‌ಕೌಂಟರ್‌ನಲ್ಲಿ ಮೂವರು ಮೃತಪಟ್ಟಿರುವ ಹನೂರು ಎನ್‌ಕೌಂಟರ್ ಪ್ರಕರಣದ ಕುರಿತು ತಮಿಳುನಾಡಿನ ಮಾಜಿ ಮುಖ್ಯಮಂತ್ರಿ ಒ. ಪನ್ನೀರಸೆಲ್ವಂ ನೀಡಿರುವ ಹೇಳಿಕೆ ಬಗ್ಗೆ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ತಮಿಳುನಾಡಿನ ರಾಜಕೀಯ ನಾಯಕರು ಒಕ್ಕೂಟ ವ್ಯವಸ್ಥೆಯನ್ನು ಗೌರವಿಸಬೇಕು ಹಾಗೂ ಇತರ ರಾಜ್ಯಗಳ ವ್ಯವಹಾರಗಳಲ್ಲಿ ಹಸ್ತಕ್ಷೇಪ ಮಾಡಬಾರದು ಎಂದು ಒತ್ತಾಯಿಸಿದರು.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಡಿ ಕೆ ಶಿವಕುಮಾರ್, "ಇದು ಒಕ್ಕೂಟ ವ್ಯವಸ್ಥೆ. ಯಾವುದೇ ರಾಜ್ಯ ಮತ್ತೊಂದು ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪ ಮಾಡಬಾರದು. ಪನ್ನೀರಸೆಲ್ವಂ ಆಗಿರಲಿ ಅಥವಾ ಯಾರೇ ಆಗಿರಲಿ, ಅವರು ರಾಜಕೀಯ ನೀತಿಯನ್ನು ಪಾಲಿಸಬೇಕು.



ತಮಿಳುನಾಡಿನ ಕಾನೂನು ಮತ್ತು ಸುವ್ಯವಸ್ಥೆ ವಿಚಾರದಲ್ಲಿ ನಾನು ಹಸ್ತಕ್ಷೇಪ ಮಾಡಲು ಸಾಧ್ಯವಿಲ್ಲ. ಪ್ರತಿಯೊಂದು ರಾಜ್ಯಕ್ಕೂ ತನ್ನದೇ ಆದ ಸಮಸ್ಯೆಗಳಿವೆ. ಇದನ್ನೂ ಅವರು ಅರ್ಥಮಾಡಿಕೊಳ್ಳಬೇಕು," ಎಂದರು.

ನಮ್ಮ ರಾಜ್ಯದ ಹಿತಾಸಕ್ತಿಗಳನ್ನು ಹೇಗೆ ರಕ್ಷಿಸಬೇಕೆಂಬುದು ನಮಗೆ ಗೊತ್ತಿದೆ. ಅವರು ಅವರ ಕೆಲಸ ಮಾಡಲಿ, ನಾವು ನಮ್ಮ ಕೆಲಸ ಮಾಡುತ್ತೇವೆ. ಅವರ ಆಡಳಿತದಲ್ಲಿ ಹಸ್ತಕ್ಷೇಪ ಮಾಡಲು ನನಗೆ ಇಷ್ಟವಿಲ್ಲ ಎಂದು ಅವರು ಹೇಳಿದರು.

ಈ ಪ್ರಕರಣದ ಕುರಿತು ಪ್ರಾಮಾಣಿಕ ತನಿಖೆ ನಡೆಸಬೇಕು ಎಂದು ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಆಗ್ರಹಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಡಿ ಕೆ ಶಿವಕುಮಾರ್, ಈ ಬಗ್ಗೆ ನಾನು ಯಾವುದೇ ಪ್ರತಿಕ್ರಿಯೆ ನೀಡಲು ಬಯಸುವುದಿಲ್ಲ. ಇದು ಸಾಮಾನ್ಯ ಚರ್ಚೆಯಷ್ಟೇ. ಅವರು ಅವರ ಕೆಲಸ ಮಾಡಲಿ, ನಾವು ನಮ್ಮ ಕೆಲಸ ಮಾಡುತ್ತೇವೆ ಎಂದರು.

ಕರ್ನಾಟಕ ಅರಣ್ಯ ಇಲಾಖೆ ನೀಡಿರುವ ವಿವರಣೆ ಸ್ವೀಕಾರಾರ್ಹವಲ್ಲ ಎಂದು ಹೇಳಿದ್ದ ತಮಿಳು ನಾಡು ಸಿಎಂ ವಿಜಯ್, ಪ್ರಕರಣದ ಕುರಿತು ಉನ್ನತ ಮಟ್ಟದ ತನಿಖೆ ನಡೆಸುವಂತೆ ಆಗ್ರಹಿಸಿದ್ದರು.

# ಸರ್ಕಾರಿ ವೈದ್ಯಕೀಯ ಕಾಲೇಜ್ ಕಾಮಗಾರಿ ಆರಂಭಕ್ಕೆ ಆಗ್ರಹ

## ವಿಜಯಪುರ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಡಿಪಿಆರ್ ಸಲ್ಲಿಕೆ, ಮಂಜೂರಾತಿ ಹಾಗೂ ನೋಂದಣಿ ಪ್ರಕ್ರಿಯೆ ಪೂರ್ಣ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಿಸಲು ಆಗ್ರಹಿಸಿ ಕಾಲೇಜು ಸ್ಥಾಪನಾ ಹೋರಾಟ ಸಮಿತಿಯ ಸದಸ್ಯರು ವಿಶೇಷ ಅಧಿಕಾರಿಯಾಗಿ ನೇಮಕಗೊಂಡಿರುವ ಡಾ. ಜಾನಕಿ ತೊರವಿ ಅವರನ್ನು ಭೇಟಿ ಮಾಡಿ, ಕಾಲೇಜು ಸ್ಥಾಪನೆ ಹಾಗೂ ಡಿಪಿಆರ್ (DPR) ಪ್ರಸ್ತುತ ಸ್ಥಿತಿಗತಿಯ ಕುರಿತು ಸಮಗ್ರ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಅಧಿಕಾರಿಗಳು ನೀಡಿರುವ ಮಾಹಿತಿಯಂತೆ, ವಿಜಯಪುರ ಸರ್ಕಾರಿ ವೈದ್ಯಕೀಯ ಕಾಲೇಜಿನ ವಿಸ್ತೃತ ಯೋಜನಾ ವರದಿ (DPR) ಸಂಪೂರ್ಣವಾಗಿ ಸಿದ್ಧಗೊಂಡು ಸರ್ಕಾರಕ್ಕೆ ಸಲ್ಲಿಕೆಯಾಗಿದ್ದು, ಅದಕ್ಕೆ ಮಂಜೂರಾತಿಯೂ (Approval) ದೊರೆತಿದೆ. ಅಷ್ಟೇ ಅಲ್ಲದೆ, ವಿಜಯಪುರ ಸರ್ಕಾರಿ ವೈದ್ಯಕೀಯ ಕಾಲೇಜಿನ ಅಧಿಕೃತ ನೋಂದಣಿ (Registration) ಪ್ರಕ್ರಿಯೆಯೂ ಯಶಸ್ವಿಯಾಗಿ ಪೂರ್ಣಗೊಂಡಿದೆ ಎಂದು ಡಾ:ಜಾನಕಿ ತೊರವಿ ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಮಿತಿಯ ಹಿರಿಯ ಸದಸ್ಯ ಡಾ. ಬಿ. ಭಗವಾನ್ ರೆಡ್ಡಿ ಅವರು, "ವಿಜಯಪುರ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಮುಂಬರುವ ಶೈಕ್ಷಣಿಕ ವರ್ಷದಲ್ಲೇ ವಿದ್ಯಾರ್ಥಿಗಳ ದಾಖಲಾತಿ ಪ್ರಕ್ರಿಯೆ ಆರಂಭವಾಗುವಂತೆ ತಮ್ಮ ಹಂತದಲ್ಲಿನ ಎಲ್ಲಾ ಕಾರ್ಯಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನಾ ಹೋರಾಟ ಸಮಿತಿಯ ಸದಸ್ಯರಾದ ಅಕ್ರಮ್ ಮಾಶಾಳ್ಕರ್, ನೀಲಂಬಿಕಾ ಬಿರಾದಾರ್, ಭೋಗೇಶ್ ಸೋಲಾಪುರ್, ಲಕ್ಷ್ಮಣ್ ಹಂದರಾಳ್, ಗಿರೀಶ್ ಕಲಘಟಗಿ, ಜಗದೇವ್ ಸೂರ್ಯವಂಶಿ, ಬಾಳು ಜೇವೂರ್, ಬಿ.ಎಸ್.ಬೀರಕಬ್ಬಿ, ಮಲ್ಲಿಕಾರ್ಜುನ್ ಎಚ್.ಟಿ, ಶ್ರೀನಾಥ್ ಪೂಜಾರಿ, ಡಾ.ಎಂ.ಆರ್.ಗುರಿಕಾರ್, ಸಿದ್ದರಾಮ್ ಹಳ್ಳೂರ್, ಸುರೇಶ್ ಜಿ.ಬಿ., ಸುರೇಶ್ ಬಿಜಾಪುರ, ಲಲಿತಾ ಬಿಜ್ಜರಗಿ, ಲಕ್ಷ್ಮಣ್ ಕಂಬಾಗಿ, ಲಿಂಗರಾಜ್ ಬಿದರಕುಂದಿ, ಸಂತೋಷ್ ನಾಯಕ್, ಬಾಬಾಸಾಹೇಬ್ ಹತ್ತರಕಿಹಾಳ್, ಜ್ಯೋತಿ ಮಿಣಜಿಗಿ, ಸುಶೀಲಾ ಮಿಣಜಿಗಿ, ಭಾಗ್ಯ ಗಡದಿನ್ನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೃಷ್ಣ ಜನ್ಮಾಷ್ಟಮಿಗೆ ಸಜ್ಜಾದ ಕೃಷ್ಣ: ವಾದಿರಾಜ ಮಠ ಕೃಷ್ಣ ಜನ್ಮಾಷ್ಟಮಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಕೃಷ್ಣ–ವಾದಿರಾಜ ಮಠದಲ್ಲಿ ಸೆಪ್ಟೆಂಬರ 4–5 ರಂದು ಕೃಷ್ಣ ಜನ್ಮಾಷ್ಟಮಿಯನ್ನು ಆಚ–'ರಿಸಲಾಗುವದೆಂದು ಶ್ರೀಮಠದ ವಿಜಯಪುರ ಶಾಖೆಯ ಗೌರವಾಧ್ಯಕ್ಷ ಗೋಪಾಲ ನಾಯಕ ಹೇಳಿದರು. ಭಕ್ತರ ಸಂಭ್ರಮ ಸಡಗರ ಮಧ್ಯ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಿದ ಸಂದರ್ಭದಲ್ಲಿ ಮಾತನಾಡಿದ ಅವರು ದಿನಾಂಕ 4 ರಂದು ಶ್ರೀ ಕೃಷ್ಣ ದೇವರಿಗೆ ಲಕ್ಷ ತುಳಸಿ ಅರ್ಪಣೆ , ಮಹಿಳಾ ಮಂಡಳಿಗಳಿಂದ ಅಖಂಡ ಭಜನೆ ಮರು ದಿನ ಪಂಚಾಮೃತ ಅಭಿಷೇಕ ಪೂಜೆ ನೈವೇದ್ಯ ಮತ್ತು ಪ್ರಸಾದ ವಿತರಣೆ ನಡೆಯುತ್ತವೆ ಎಂದು ಹೇಳಿದರು.

ಶ್ರೀಗಳ ಆದೇಶದ ಮೇರೆಗೆ ಶ್ರೀಮಠದ ಆವರಣದಲ್ಲಿದ್ದ ವಿದ್ಯಾರ್ಥಿ ನಿಲಯದ ಹಳೆ ಕಟ್ಟಡ ತೆರವುಗೊಳಿಸಿ ಆಧುನಿಕ ನೂತನ ಕಟ್ಟಡ ನಿರ್ಮಾಣ ಮಾಡುವ ಕೆಲಸ ವೇಗದಿಂದ ನಡೆದಿದೆ. ಅಂದಾಜು ರೂ. 7 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುವ ಕಟ್ಟಡಕ್ಕೆ ಅನೇಕ ಭಕ್ತರು ದೇಣಿಗೆ ನಿಡುತ್ತಿದ್ದಾರೆ. ಭಕ್ತಾದಿಗಳು ಇನ್ನಷ್ಟು ದೇಣಿಗೆ ನೀಡಲು ಮುಂದೆ ಬರಲು ಕರೆ ನೀಡಿದರು.

ಪ್ರಕಾಶ ಅಕ್ಕಲಕೋಟ ಮಾತನಾಡಿ ಹಿರಿಯರ ಸ್ಮರಣೆಯಲ್ಲಿ ಒಂದು ಕೊಣೆ ನಿರ್ಮಾಣಕ್ಕೆ ರೂ. 5 ಲಕ್ಷ ದೇಣಿಗೆ ನೀಡಿದರೆ ಅವರ ಹೆಸರು ಮತ್ತು ಭಾವ ಚಿತ್ರ ಹಾಕಲಾಗುವದು. ರೂ.25000 ಗಿಂತ ಹೆಚ್ಚಿಗೆ ದೇಣಿಗೆ ಕೊಡುವವರ ಹೆಸರನ್ನು ನಾಮ ಫಲಕದಲ್ಲಿ ಬರೆಸಲಾಗುವದು ಎಂದು ವಿವರಿಸಿದರು. ಇದೇ ಸಂದರ್ಭದಲ್ಲಿ ಸಮಿತಿ ಸದಸ್ಯ ವ್ಹಿ.ಬಿ.ಕುಲಕರ್ಣಿ ತಮ್ಮ ತಂದೆ ಭಗವಂತರಾವ್ ಹೆಸರಿನಲ್ಲಿ ರೂ. 5 ಲಕ್ಷ ದೇಣಿಗೆ ಪ್ರಕಟಿಸಿದರು. ಸಮಿತಿ ಅಧ್ಯಕ್ಷ ಕಿರಣ ಚುಳಕಿ ಅವರೂ ತಮ್ಮ ತಂದೆ ಸ್ಮರಣೆಯಲ್ಲಿ ರೂ. 5 ಲಕ್ಷ ಕೋಣೆ ನಿರ್ಮಾಣಕ್ಕೆ ದೇಣಿಗೆ ಕೊಡುವದಾಗಿ ಹೇಳಿದರು.

ಸದಸ್ಯರಾದ ಡಾ ಮಲಘಾಣ, ಅಶೋಕರಾವ್, ವಿಕಾಸ ಪದಕಿ ವ್ಹಿ ಸಿ ಕುಲಕರ್ಣಿ, ಮೋಹನ ಕೌತಾಳ, ಗೋವಿಂದ ಜೋಶಿ ವ್ಯವಸ್ಥಾಪಕ ಪಂಡಿತ ವಾಸುದೇವ ಆಚಾರ್ಯ, ಪಂಡಿತ ಸಮೀರಾಚಾರ್ಯ ಭಜನಾ ಮಂಡಳಿ ಪ್ರತಿನಿಧಿಗಳಾದ ಅನಿತಾ ಪದಕಿ ಮತ್ತು ಲಕ್ಷ್ಮಿ ಕುಲಕರ್ಣಿ. ಗುತ್ತಿಗೆದಾರ ಮೋಹನ ಕುಲಕರ್ಣಿ ಶ್ರೀವತ್ಸ ಕುಲಕರ್ಣಿ ಮುಂತಾದವರು ಉಪಸ್ಥಿತರಿದ್ದರು.

# 2ನೇ ದಿನಕ್ಕೆ ಕಾಲಿಟ್ಟ ಬಿಜೆಪಿಯ ಬೃಹತ್ ಧರಣಿ ಸತ್ಯಾಗ್ರಹ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಚಿವ ಬಿ.ನಾಗೇಂದ್ರ ರಾಜೀನಾಮೆ ಹಾಗೂ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಜಿಲ್ಲಾ ಬಿಜೆಪಿ ನಗರದಲ್ಲಿ ನಡೆಯುತ್ತಿರುವ ಬೃಹತ್ ಧರಣಿ ಸತ್ಯಾಗ್ರಹ 2ನೇ ದಿನಕ್ಕೆ ಕಾಲಿಟ್ಟಿದೆ.

ಪ್ರತಿಭಟನೆಯ ನೇತೃತ್ವವನ್ನು ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ, ಯುವ ಮೋರ್ಚಾ, ಅಲ್ಪಸಂಖ್ಯಾತ ಮೋರ್ಚಾ ಹಾಗೂ ವಿವಿಧ ಮೋರ್ಚಾ ನೇತೃತ್ವದಲ್ಲಿ ಧರಣಿ ನಡೆಸಿದರು.

ಈ ಸಂದರ್ಭದಲ್ಲಿ ಸಂಸದ ರಮೇಶ ಜಿಗಜಿಣಗಿ ಮಾತನಾಡಿ, ಸಚಿವ ಬಿ.ನಾಗೇಂದ್ರ ಅವರು ಸರಿ ಇದ್ದರೆ, ಸಿದ್ಧರಾಮಯ್ಯನವರು ಸದನದಲ್ಲಿ ಯಾಕೆ ಭ್ರಷ್ಟಾಚಾರ ಆಗಿದೆ ಎಂದು ಹೇಳಿದರು. ಯಾಕೆ ಅವರು ಸದನದಲ್ಲಿ ಒಪ್ಪಿಕೊಂಡು ಜನರಿಗೆ ಸುಳ್ಳು ಹೇಳಿ ಮೋಸ ಮಾಡಿದರು. ಸಿದ್ದರಾಮಯ್ಯನವರು ಹೇಳಿದ್ದು ಸುಳ್ಳು ಎನ್ನುವುದಾದರೆ ಅವರನ್ನು ಕಾಂಗ್ರೆಸ್ ಪಕ್ಷದಿಂದ ಕಿತ್ತು ಹೊರಗೆ ಹಾಕಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಸ್ವಪ್ನಾ ಕಣಮುಚನಾಳ ಮಾತನಾಡಿ, ಕಾಂಗ್ರೆಸ್ ಎಂದರೆ ಪ್ರಗತಿ ಶೂನ್ಯ. ಇತ್ತೀಚಿಗೆ ನಡೆದ ಸಂಪುಟ ವಿಸ್ತರಣೆ ಸಂದರ್ಭದಲ್ಲಿ ಯಾವೊಬ್ಬ ಮಹಿಳೆಯ–ರಿಗೆ ಇಲ್ಲಿಯವರೆಗೂ ಸಚಿವ ಸ್ಥಾನದ ಅವಕಾಶ ನೀಡಿದೆ ಮಹಿಳಾ ವಿರೋಧಿ ಧೋರಣೆ ತೋರಿ ಮಹಿಳೆಯರಿಗೆ ಅಪಮಾನ ಮಾಡಿದ್ದಾರೆ. ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದ ಆರೋಪ ಎದುರಿಸುತ್ತಿರುವ ಬಿ.ನಾಗೇಂದ್ರ ಅವರನ್ನು ಸಚಿವ ಸ್ಥಾನದಿಂದ ಶೀಘ್ರ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ಯುವ ಮೋರ್ಚಾ ಅಧ್ಯಕ್ಷ ರಾಘವೇಂದ್ರ ಕಾಪ್ಸೆ ಮಾತನಾಡಿ, ವಾಲ್ಮೀಕಿ ಅಭಿವೃದ್ಧಿ ನಿಗಮಕ್ಕೆ ಸಂಬಂಧಿಸಿದ ಅಕ್ರಮಗಳ ಕುರಿತು ತನಿಖೆ ಮತ್ತು ಆರೋಪಗಳು ಎದುರಾದ ಸಂದರ್ಭದಲ್ಲೂ ನಾಗೇಂದ್ರ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರಿಸಿರುವುದು ಸರ್ಕಾರದ ನಡೆ ಕುರಿತು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಹೇಳಿದರು.

ಅಲ್ಪಸಂಖ್ಯಾತ ಮೋರ್ಚಾ ಅಧ್ಯಕ್ಷ ಅಬ್ದುಲ್ ರಜಾಕ ವಾಲೀಕಾರ, ಉಪ ಮಹಾಪೌರರಾದ ಸುಮಿತ್ರಾ ಜಾಧವ ಮಾತನಾಡಿದರು.

ಈ ಸಂದರ್ಭ ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಮಾಜಿ ಎಂಎಲ್ಸಿ ಅರುಣ ಶಹಾಪುರ, ಭೀಮಾಶಂಕರ ಹದನೂರ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮಳುನಗೌಡ ಪಾಟೀಲ, ಸಾಬಣ್ಣ ಮಾಶ್ಯಾಳ, ವಿಜಯ ಜೋಶಿ, ಪರಶುರಾಮ ರಜಪೂತ ಸೇ–ರಿದಂತೆ ಹಲವರಿದ್ದರು.

## ನೂತನ ವಿದ್ಯಾರ್ಥಿನಿಯರ ಪ್ರವೇಶಾತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಕುಲಪತಿ ಪ್ರೊ.ವಿಜಯಾ ಬಿ. ಕೋರಿಶೆಟ್ಟಿ ಹೇಳಿಕೆ

# ವಿದ್ಯಾರ್ಥಿನಿಯರ ಸಮಗ್ರ ಅಭಿವೃದ್ಧಿಗೆ ಮಹಿಳಾ ವಿವಿ ಆದ್ಯತೆ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ವಿದ್ಯಾರ್ಥಿನಿಯರ ಶೈಕ್ಷಣಿಕ ಪ್ರಗತಿಯ ಜತೆಗೆ ಅವರ ಸಮಗ್ರ ಅಭಿವೃದ್ಧಿಗೆ ಮಹಿಳಾ ವಿಶ್ವವಿದ್ಯಾಲಯವು ಪ್ರಮುಖ ಆದ್ಯತೆ ನೀಡುತ್ತಿದೆ ಎಂದು ಕುಲಪತಿ ಪ್ರೊ. ವಿಜಯಾ ಬಿ. ಕೋರಿಶೆಟ್ಟಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ 2026–27ನೇ ಸಾಲಿನ ಸ್ನಾತಕೋತ್ತರ ಹಾಗೂ ಪಿಜಿ ಡಿಪ್ಲೊಮಾ ಕೋರ್ಸ್ಗಳ ಪ್ರವೇಶಾತಿ ಘಟಕದ ಸಹಯೋಗದಲ್ಲಿ ಬುಧವಾರ ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ನೂತನ ವಿದ್ಯಾರ್ಥಿನಿಯರ ಪ್ರವೇಶಾತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

2003ರಲ್ಲಿ ಸ್ಥಾಪನೆಯಾದ ವಿಶ್ವವಿದ್ಯಾಲಯವು 281 ಎಕರೆ ವಿಶಾಲ ಕ್ಯಾಂಪಸ್ ಹೊಂದಿದ್ದು, ವಿದ್ಯಾರ್ಥಿನಿಯ–ರಿಗೆ ಗುಣಮಟ್ಟದ ಶಿಕ್ಷಣದ ಜತೆಗೆ ಆರೋಗ್ಯ ಕೇಂದ್ರ, ವಸತಿ ನಿಲಯ, ಪ್ಲೇಸ್‌ಮೆಂಟ್ ಸೌಲಭ್ಯ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸುತ್ತಿದೆ. ಅಷ್ಟೇ ಅಲ್ಲದೇ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿನಿಯರಿಗೆ ವಿವಿಧ ವಿದ್ಯಾರ್ಥಿವೇತನ ಸೌಲಭ್ಯಗಳು ಲಭ್ಯವಿದ್ದು, ಅವುಗಳ ಸದುಪಯೋಗ ಪಡೆದುಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಮೌಲ್ಯಮಾಪನ ಕುಲಸಚಿವ ಪ್ರೊ. ಬಿ.ಎಲ್. ಲಕ್ಕಣ್ಣವರ, ಪ್ರವೇಶಾತಿ ಸಮಾಲೋಚನಾ ಅಧ್ಯಕ್ಷ ಪ್ರೊ. ಅಜೀಜ ಮಕಾಂದಾರ, ಪ್ರವೇಶಾತಿ ಅಧ್ಯಕ್ಷ ಪ್ರೊ. ಗಂಗಾಧರ ಸೋನಾರ, ಹಾಗೂ ವಿವಿಧ ವಿಭಾಗಗಳ ಪ್ರಾಧ್ಯಾಪಕರು, ಸಂಶೋಧನ ವಿದ್ಯಾರ್ಥಿನಿಯರು, ಪಿ. ಜಿ ವಿದ್ಯಾರ್ಥಿನಿಯರು, ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಶೈಕ್ಷಣಿಕ ಪ್ರಗತಿಯ ಜತೆಗೆ ಸಮಗ್ರ ಅಭಿವೃದ್ಧಿಗೆ ಮಹಿಳಾ ವಿವಿ ಆದ್ಯತೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿದ್ಯಾರ್ಥಿನಿಯರ ಶೈಕ್ಷಣಿಕ ಪ್ರಗತಿಯ ಜತೆಗೆ ಅವರ ಸಮಗ್ರ ಅಭಿವೃದ್ಧಿಗೆ ಮಹಿಳಾ ವಿಶ್ವವಿದ್ಯಾಲಯವು ಪ್ರಮುಖ ಆದ್ಯತೆ ನೀಡುತ್ತಿದೆ ಎಂದು ಕುಲಪತಿ ಪ್ರೊ. ವಿಜಯಾ ಬಿ. ಕೋರಿಶೆಟ್ಟಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ 2026–27ನೇ ಸಾಲಿನ ಸ್ನಾತಕೋತ್ತರ ಹಾಗೂ ಪಿಜಿ ಡಿಪ್ಲೊಮಾ ಕೋರ್ಸ್ಗಳ ಪ್ರವೇಶಾತಿ ಘಟಕದ ಸಹಯೋಗದಲ್ಲಿ ಬುಧವಾರ ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ನೂತನ ವಿದ್ಯಾರ್ಥಿನಿಯರ ಪ್ರವೇಶಾತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. 2003ರಲ್ಲಿ ಸ್ಥಾಪನೆಯಾದ ವಿಶ್ವವಿದ್ಯಾಲಯವು 281 ಎಕರೆ ವಿಶಾಲ ಕ್ಯಾಂಪಸ್ ಹೊಂದಿದ್ದು, ವಿದ್ಯಾರ್ಥಿನಿಯ–ರಿಗೆ ಗುಣಮಟ್ಟದ ಶಿಕ್ಷಣದ ಜತೆಗೆ ಆರೋಗ್ಯ ಕೇಂದ್ರ, ವಸತಿ ನಿಲಯ, ಪ್ಲೇಸ್‌ಮೆಂಟ್ ಸೌಲಭ್ಯ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸುತ್ತಿದೆ. ಅಷ್ಟೇ ಅಲ್ಲದೇ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿನಿಯರಿಗೆ ವಿವಿಧ ವಿದ್ಯಾರ್ಥಿವೇತನ ಸೌಲಭ್ಯಗಳು ಲಭ್ಯವಿದ್ದು, ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

# ನೀರು ಕಳ್ಳತನದ 30 ಪ್ರಕರಣ ಭೇದಿಸಿದ ಕೆಬಿಜೆಎನ್‌ಎಲ್ ಅಧಿಕಾರಿಗಳು

## ಮಲಘಾಣ ಪಶ್ಚಿಮ ಕಾಲುವೆಯ ಕೆಳಭಾಗದಲ್ಲಿ ರಂಧ್ರ ಕೊರೆದು(ಸೈಫನ್ ಹೊಡೆದು) ನೀರು ಕಳ್ಳತನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಬಲೇಶ್ವರ ತಾಲೂಕಿನಲ್ಲಿ ಮಲಘಾಣ ಪಶ್ಚಿಮ ಕಾಲುವೆಯ ಕೆಳಭಾಗದಲ್ಲಿ ರಂಧ್ರ ಕೊರೆದು(ಸೈಫನ್ ಹೊಡೆದು) ನೀರು ಕಳ್ಳತನ ಮಾಡುತ್ತಿದ್ದ 30 ಪ್ರಕರಣಗಳನ್ನು ಕೆಬಿಜೆಎನ್‌ಎಲ್ ಅಧಿಕಾರಿಗಳು ಭೇದಿಸಿದ್ದು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮದ ಪ್ರಕ್ರಿಯೆ ಪ್ರಾರಂಭಿಸಿದ್ದಾರೆ.

ಮಲಘಾಣ ಪಶ್ಚಿಮ ಕಾಲುವೆ ಒಟ್ಟು 118.60 ಕಿ. ಮೀ. ಉದ್ದವಿದ್ದು, ಈ ಕಾಲುವೆಯ 100 ಕಿ. ಮೀ. ವರೆಗೆ ಮಾತ್ರ ನೀರು ಬರುತ್ತಿತ್ತು. ಆದರೆ,100 ಕಿ.ಮೀ.ನಿಂದ 118.60 ಕಿ. ಮೀ ಕೊನೆಯ ಹಂತದವರೆಗೆ ನೀರು ತಲುಪುತ್ತಿರಲಿಲ್ಲ. ಇದರಿಂದಾಗಿ ಕಾಲುವೆಯ ಕೊನೆಯ ಭಾಗದ ರೈತರು ಅಳಲು ತೋಡಿಕೊಂಡಿದ್ದರು.

ಈ ಹಿನ್ನೆಲೆಯಲ್ಲಿ ಕಾರ್ಯೋನ್ಮುಖರಾದ ಕೆಬಿಜೆಎನ್‌ಎಲ್ ಅಧಿಕಾರಿಗಳು ತಪಾಸಣೆ ನಡೆಸಿದಾಗ ಬಬಲೇಶ್ವರ ತಾಲೂಕಿನ ಯಕ್ಕುಂಡಿ, ಹೊಕ್ಕುಂಡಿ, ಅರ್ಜುಣಗಿ, ಹೆಬ್ಬಳಟ್ಟಿ ವ್ಯಾಪ್ತಿಯಲ್ಲಿ ಸುಮಾರು 30 ಕಡೆಗಳಲ್ಲಿ ಕಾಲುವೆಯ ಬುಡದಲ್ಲಿ ಯಾರ ಕಣ್ಣಿಗೂ ಕಾಣದಂತೆ ರಂಧ್ರ ಕೊರೆದು ಸುಮಾರು 4 ರಿಂದ 6 ಇಂಚುಗಳ ಪೈಪುಗಳನ್ನು ಅಳವಡಿಸಿ ಅಕ್ರಮವಾಗಿ ನೀರು ಪಡೆಯುತ್ತಿರುವುದು ಪತ್ತೆಯಾಗಿದೆ.



ಈ ಮಧ್ಯೆ ಇತ್ತೀಚೆಗೆ ಕಾಲುವೆಯ ಕೊನೆಯ ಭಾಗವರೆಗೂ ನೀರು ಹ–ರಿಸುವಂತೆ ರೈತರು ಅರ್ಜುಣಗಿಯಲ್ಲಿ ಧರಣಿ ಸತ್ಯಾಗ್ರಹ ನಡೆಸಿದ್ದರು. ಈ ಧರಣಿ ಸತ್ಯಾಗ್ರಹದಲ್ಲಿ ಪಾಲ್ಗೊಂಡ ಕೆಲವು ಜನರು ಇದೇ ಕಾಲುವೆಯಲ್ಲಿ ಸೈಫನ್ ಹೊಡೆದು ನೀರು ಕಳ್ಳತನ ಮಾಡಿರುವುದು ಅಧಿಕಾರಿಗಳ ತನಿಖೆಯ ವೇಳೆ ಬೆಳಕಿಗೆ ಬಂದಿದೆ. ಅಧಿಕಾರಿಗಳು ಫೆಬ್ರುವರಿಯಲ್ಲಿ ಕಾಲುವೆಗಳ ನಿರ್ವಹಣೆ ಸಂದರ್ಭದಲ್ಲಿ ಇಂಥ ಸೈಫನ್(ರಂಧ್ರ)ಗಳಿಗೆ ಕಾಂಕ್ರಿಟ್ ಹಾಕಿ ಮುಚ್ಚಿದ್ದರು. ಆದರೆ, ಇತ್ತೀಚೆಗೆ ನೀರು ಬಿಡುಗಡೆ ಮಾಡಿದಾಗ ನೀರುಗಳ್ಳರು ಮತ್ತೆ ಆ ಕಾಂಕ್ರಿಟ್ ಅಕ್ರಮವಾಗಿ ನೀರು ಪಡೆಯುತ್ತಿರುವುದು ಬೆಳಕಿಗೆ ಬಂದಿದೆ.

ಈ ಹಿನ್ನೆಲೆಯಲ್ಲಿ ಅಕ್ರಮವಾಗಿ ನೀರು ಕಳ್ಳತನ ಮಾಡುತ್ತಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕೆಬಿಜೆಎನ್‌ಎಲ್ ಬಬಲೇಶ್ವರ ವಿಭಾಗದ ಎಕ್ಸಿಕ್ಯೂಟಿವ್ ಎಂಜಿನಿಯರ್ ರಾಜೇಂದ್ರ ವೈ. ರೂಡಗಿ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.


# ಬದಲಾವಣೆಯ ಹೆಜ್ಜೆ

■ ಉದಯರಶ್ಮಿ ದಿನಪತ್ರಿಕೆ

ಜೀವನದಲ್ಲಿ ಬದಲಾವಣೆ ಅನಿವಾರ್ಯ. ಪ್ರಕೃತಿಯಿಂದ ಹಿಡಿದು ಮಾನವನ ಬದುಕಿನವರೆಗೂ ಪ್ರತಿಯೊಂದೂ ಬದಲಾವಣೆಯ ಹಾದಿಯಲ್ಲೇ ಸಾಗುವುದು. ಬದಲಾವಣೆಯನ್ನು ಸ್ವೀಕರಿಸಿದವರು ಬೆಳೆಯುತ್ತಾರೆ. ಅದನ್ನು ಅನುಸರಿಸದೇ ಇದ್ದವರು ಕಾಲದ ಹಿಂದೆಯೇ ಇರುತ್ತಾರೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಬದಲಾವಣೆಯ ಹೆಜ್ಜೆಯನ್ನು ಧೈರ್ಯದಿಂದಲೇ ಇಡಬೇಕು.

ಬದಲಾವಣೆಯೆಂದರೆ ಕೇವಲ ಹೊಸತನ್ನು ಅಳವಡಿಸಿಕೊಳ್ಳುವುದಲ್ಲ ಬದಲಾಗಿ ನಮ್ಮಲ್ಲಿರುವ ದೋಷಗಳನ್ನು ತಿದ್ದಿಕೊಂಡು ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳುವುದು ಎಂದರ್ಥ. ಕೆಟ್ಟ ಅಭ್ಯಾಸವನ್ನು ಬಿಟ್ಟು ಒಳ್ಳೆಯ ಅಭ್ಯಾಸವನ್ನು ರೂಢಿಸಿಕೊಳ್ಳುವುದು, ನಕಾರಾತ್ಮತೆಯನ್ನು ಮರೆತು ಸರಾರಾತ್ಮತೆಯ ಕಡೆಗೆ ಒಲವನ್ನು ರೂಢಿಸಿಕೊಳ್ಳುವುದು. ಸಮಯದ ಮಹತ್ವವನ್ನು ಅರಿತು ಶಿಸ್ತಿನ ಜೀವನ ನಡೆಸುವುದು. ಇವೆಲ್ಲ ಬದಲಾವಣೆಯ ಹೆಜ್ಜೆಗಳೇ.

ಸಮಾಜದ ಅಭಿವೃದ್ಧಿಯು ವ್ಯಕ್ತಿಯ ಬದಲಾವಣೆಯಿಂದಲೇ ಆಗುವುದು. ವ್ಯಕ್ತಿಯ ಉತ್ತಮ ಬದಲಾವಣೆ ಇತರರಿಗೆ ಮಾದರಿಯಾಗುವುದು. ಪರಿಸರ ಸಂರಕ್ಷಣೆ, ಸ್ವಚ್ಛತೆ, ಶಿಕ್ಷಣ, ಮಾನವೀಯತೆ ಹಾಗೂ ಸಹಾನುಭೂತಿ ಇಂತಹ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಾಗ ಸಮಾಜವು ಅಭಿವೃದ್ಧಿಯೆಡೆಗೆ ಸಾಗುವುದು.



## ಭಾವರಶ್ಮಿ



ಸಮಾಜದಲ್ಲಿ ಬದಲಾವಣೆ ಯಾವ ಯಾವ ಕ್ಷೇತ್ರದಲ್ಲಿ ಆಗುತ್ತಿದೆ ಎಂಬುದಾಗಿ ಒಮ್ಮೆ ಗಮನಹರಿಸಿದಾಗ..

1) ಕೃಷಿಯಲ್ಲಿ ಹೊಸ ಹೊಸ ತಂತ್ರಜ್ಞಾನ ಅಳವಡಿಕೆ, ಯಾಂತ್ರೀಕರಣ,

2)ಶಿಕ್ಷಣದಲ್ಲಿ ಆನ್ಲೈನ್ ಕಲಿಕಾ ವಿಧಾನ, ಈಗಂತೂ ಂಖ ದಮೂಲಕವೂ ಹೊಸ ಹೊಸ ವಸ್ತುವಿಷಯಗಳಿಗೆ ಸಂಬಂಧಪಟ್ಟಂತೆ ಮಾಹಿತಿ ದೊರಕುವುದು.

3)ತಂತ್ರಜ್ಞಾನದಲ್ಲಿ ಹೊಸ ಹೊಸ ಯಂತ್ರಗಳ ಅಳವಡಿಕೆಯಿಂದ ನೂತನ ಆವಿಷ್ಕಾರ.

4) ನಮ್ಮ ಹಿರಿಯರ ನಡವಳಿಕೆ ಅಂದು ಇಂದು, ನಮ್ಮ ತಂದೆ ತಾಯಿಯರ ಆಲೋಚನೆಯಲ್ಲಿ, ಪ್ರಬುದ್ಧತೆಯಲ್ಲಿ ಆಕಾಶ ಭೂಮಿಯಷ್ಟು ಅಂತರ ಕಾಣತಿದೀವಿ.

5) ಪರಿಸರದಲ್ಲಿ ಹವಾಮಾನ ಪ್ರತಿಕೂಲ, ಬಿರುಗಾಳಿ, ನೆರೆ–ಬರ ಒಣ ಪ್ರದೇಶ ಹೀಗೆ ನಾನಾತರನಾದ ಪ್ರತಿಕೂಲ ವಾತಾವರಣ ಕಾಣುತ್ತಿದೆ. ಇವೆಲ್ಲ 'ಗ್ಲೋಬಲ್ ವಾರ್ಮಿಂಗ್' ನ ಕಾರಣದಿಂದ.

6) ಸಂಪ್ರದಾಯ, ಆಚರಣೆ, ಮೂಢಪದ್ಧತಿಗಳಲ್ಲಿ ಇತ್ತೀಚೆಗೆ ಗಣನೀಯ ಬದಲಾವಣೆ ಕಂಡುಬರುತ್ತಿದೆ. ಅಸ್ಪೃಶ್ಯರನ್ನು ಕೀಳಾಗಿ, ಅವರನ್ನು ಮುಟ್ಟದೇ ಅವರನ್ನು ನಮ್ಮಿಂದ ಬೇರ್ಪಡಿಸಿ ನೋಡುವ ಕಾಲ ಹೋಗಿ ಇತ್ತೀಚೆಗೆ ಅವರಿಗೆಂದೇ ವಿಶೇಷ ರಿಯಾಯಿತಿ ಎಲ್ಲ ಕ್ಷೇತ್ರದಲ್ಲಿ ಕಾಣಸಿಗುತ್ತಿದೆ.

7) ತೃತೀಯ ಲಿಂಗಿಗಳು.. ಮಂಗಳಮುಖಿಯರಿಗೆ ಅವರನ್ನು ಖಿಡಿಚಿಛಿಂಜಟಜಜಡಿ ಎಂದು ಗುರುತಿಸಲಾಗುತ್ತದೆ. ಅವರಿಗೆಂದೇ ಗುರುತಿನ ಚೀಟಿ ಕೇಂದ್ರ ಸರ್ಕಾರದಿಂದ, ವಸತಿ ಸೌಕರ್ಯ, ಆರ್ಥಿಕ ಭದ್ರತೆ, ಮಾಸಿಕ ವೇತನ ಪಡೆಯುವ ಸೌಲಭ್ಯ, ಸಂವಿಧಾನ ಅವರಿಗೆಂದೇ ಕಾನೂನು ರಕ್ಷಣೆ ಪಡೆಯುವ ಹಕ್ಕು ಕೊಟ್ಟಿದೆ. ದೇಶದ ನಾಗರೀಕನಾಗಿ ಇರಬೇಕಾದ ವಿಶೇಷ ಸೌಲಭ್ಯ ಹಾಗೂ ಹಕ್ಕುಗಳಲ್ಲೊಂದಾದ ಮತಚಲಾಯಿಸುವ ಹಕ್ಕು ಕೂಡ ಇವರಿಗೆ ನೀಡಿದೆ. ಇತ್ತೀಚೆಗೆ ಇವರಿಗೆ ಶಿಕ್ಷಣದಲ್ಲಿ ಯಾವುದೇ ತಾರತಮ್ಯ ಎಣಿಸುವಂತಿಲ್ಲ. ಅನೇಕರು ಪೋಲಿಸ್ ಅಧಿಕಾರಿಗಳಾದ ಹಲವಾರು ಉದಾಹರಣೆಗಳಿವೆ.

8) ವಿಜ್ಞಾನ ಕ್ಷೇತ್ರದಲ್ಲಿ ಮಹತ್ತರವಾದ ಬದಲಾವಣೆ ದಿನದಿಂದ ದಿನಕ್ಕೆ ನಡೆಯುತ್ತಿದೆ. ಇಂದಿನ ಕಲಬೆರಕೆ ಅಪೌಷ್ಟಿಕ ಆಹಾರ ಹಾಗೂ ಕಂಪ್ಯೂಟರೀಕರಣದಿಂದ ಯುವಜನತೆಯಲ್ಲಿ ಬಂಜೆತನ ಹೆಚ್ಚಾಗುತ್ತಿದೆ. ಹೀಗಾಗಿ ಗಂಡಸರು ತಮ್ಮ ವೀರ್ಯವನ್ನು ಹಾಗೂ ಹೆಂಗಸರು ತಮ್ಮ ಅಂಡಾಣುವನ್ನು ಕಾಯ್ದಿರಿಸಿ ಮುಂದಿನ ದಿನಗಳಲ್ಲಿ ಖಗಿಈ ಮೂಲಕ ಸಂತಾನವನ್ನು ಪಡೆಯಲು ಉಪಯೋಗಿಸುವ ಚಿಜತಚಿಟಛಿಜ ವಿಧಾನವನ್ನು ಆರಿಸಿಕೊಂಡಿರುವರು. ಇದರಿಂದ ಅವರಿಗೆ ಬೇಕಾದ ಕಾಲಕ್ಕೆ ಮಕ್ಕಳನ್ನು ಹಾಗೂ ಮಕ್ಕಳನ್ನು ಪಡೆಯುವ ಭಾಗ್ಯವನ್ನು ಯಾವ ತಂದೆ ತಾಯಿ ಕಳೆದುಕೊಂಡಿರುತ್ತಾರೋ ಅವರಿಗೆ ಈ ಬೆಳವಣಿಗೆ ಆಶಾದಾಯಕವಾದ ವರವಾಗುವುದರಲ್ಲಿ ಸಂಶಯವಿಲ್ಲ.

9) ಆಧುನೀಕರಣ, ಸಮಾಜೀಕರಣ, ಇತ್ತೀಚೆಗೆ ಅಭಿವೃದ್ಧಿ ಹೊಂದಿದ ಅನೇಕ ದೇಶಗಳ ವ್ಯಾವಹಾರಿಕ ನೆಲೆಯ ಮಾಹಿತಿಗಳಿಂದ ಜನರಲ್ಲಿ ತಾವೂ ಅವರಂತಾಗುವ( ಅವರ ಜನಜೀವನ ಆಲೋಚನೆ, ವ್ಯವಹಾರಿಕ ಶೈಲಿಗಳ ಅನುಕರಣೆ) ಎಂಬ ಮನೋಭಾವ ಬೆಳೆಯುತ್ತಿದೆ. ಇದು ದೇಶದ ಇತರೇ ಜನರೊಡನೆ ಬೆರೆಯುವಿಕೆಗೆ ತುಂಬಾ ಅನುಕೂಲವಾಗುತ್ತದೆ.

10) ಎಲ್ಲಕ್ಕಿಂತ ಮಿಗಿಲಾಗಿ ಮೊದಲು ' ನಮಗೆ ಕುಟುಂಬ, ಸಮಾಜ, ದೇಶ, ರಾಷ್ಟ್ರ ಏನು ಕೊಟ್ಟಿದೆ ಎಂಬುದರ ಬದಲು ನಾವೇನು ಕೊಡಬಹದು' ಎಂದು ಆಲೋಚಿಸಿದರೆ ಮುಂದಿನ ಅಭಿವೃದ್ಧಿ ಮಾರ್ಗ ಸುಲಭವಾಗುತ್ತದೆ.



'ಅಜ್ಜನೆಟ್ಟಿದ ಆಲದಮರ'ಕ್ಕೆ ನೇಣು ಹಾಕಿಕೊಳ್ಳುವ ಬದಲು ಹೊಸತು ಏನಾದರೂ ಸಂಚಲನ, ಪ್ರೇರಣಾದಾಯಕ ಕೆಲಸ, ಚಿಂತನೆಗೆ ಒರೆಹಚ್ಚುವ ಕಾರ್ಯ, ನಮ್ಮ ಸುತ್ತಮುತ್ತಲಿನವರು ನಮ್ಮ ಬಗ್ಗೆ ಹೆಮ್ಮೆ ಪಡುವಂತಹದ್ದು, ಇತರರಿಗೆ ಮಾರ್ಗದರ್ಶನ ನೀಡುವಂತಹದ್ದನ್ನು ಮಾಡಿದರೆ ಅದು ನಿಜಕ್ಕೂ ' ಬದಲಾವಣೆಯತ್ತ ಒಂದು ಹೊಸ ಹೆಜ್ಜೆ, ಇದು ನಮ್ಮ ವ್ಯಕ್ತಿತ್ವದಲ್ಲಿ ಕಂಡುಬರುವ ಸಕಾರಾತ್ಮಕ ಬೆಳವಣಿಗೆ ಹಾಗೂ ಬದಲಾವಣೆ ಅನ್ನಬಹುದು. ಇಂತಹ ಯೋಜನೆಯನ್ನು ನಮ್ಮ ಭಾರತದೇಶದ ಪ್ರಜೆಯಾದ ಪ್ರತಿಯೊಬ್ಬರೂ ಯೋಚಿಸಬೇಕಾದ ಹಾಗೂ ಕಾರ್ಯರೂಪಕ್ಕೆ ತರಬೇಕಾದ ಯೋಜನೆಯಾಗಿದೆ.

ಲೇಖನ
– ಶೀತಲ್ ಹೆಗಡೆ.
ನಿರ್ವಾಹಕಿ
'ನಮ್ಮ ಕಥಾ ಅರಮನೆ'





ಕಲಬುರಗಿ:ಗ್ರಾಮ ಪಂಚಾಯತಿ ನೌಕರರಿಗೆ ಕನಿಷ್ಠ ವೇತನ ಜಾರಿ ಮಾಡಬೇಕು ಎಂಬ ಬೇಡಿಕೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘದ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾ ಪಂಚಾಯತಿ ಕಚೇರಿ ಮುಂದೆ ಇಂದು ಧರಣಿ ಸತ್ಯಾಗ್ರಹ ನಡೆಸಲಾಯಿತು. ಸಂಘದ ಜಿಲ್ಲಾ ಅಧ್ಯಕ್ಷ ನಾಗರಾಜ ಭಂಗೂರ, ಪ್ರಧಾನ ಕಾರ್ಯದರ್ಶಿ ಮಾರುತಿ ಸುಗ್ಗಾ, ಭೋಜರಾಜ ಮಾಲಿಪಾಟೀಲ, ಬಂದಗಿಸಾಬ ನದಾಫ್, ಮಹಾದೇವಪ್ಪ, ಮಲ್ಲಣ್ಣ ಹೊನಗುಂಟಿ ಸೇರಿದಂತೆ ಮತ್ತಿತರರು ಸತ್ಯಾಗ್ರಹದಲ್ಲಿ ಭಾಗವಹಿಸಿದ್ದರು.



ಕಲಬುರಗಿ: ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ಪಿ.ಟಿ ಪರಮೇಶ್ವರ ನಾಯಕ ಅವರ ಅಧ್ಯಕ್ಷತೆಯಲ್ಲಿ ಜಿಪಂ ಹೊಸ ಸಭಾಂಗಣದಲ್ಲಿಂದು ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿಪರಿಶೀಲನಾ ಸಭೆ ಜರುಗಿತು.ಜಿಲ್ಲಾಧ್ಯಕ್ಷೆ ಚಂದ್ರಿಕಾ ಪರಮೇಶ್ವರ,ಜಿಪಂ ಸಿಇಒ ರಾಹುಲ್ ಸಂಕನೂರ ಅವರು ಸೇರಿದಂತೆ ಹಲವರಿದ್ದರು.



## 10 ಪ್ರಕರಣ;42.66 ಲಕ್ಷ ಮೌಲ್ಯದ ಸ್ವತ್ತು ಜಪ್ತಿ: 18 ಜನರ ಬಂಧನ

ಕಲಬುರಗಿ: ಕ್ರೈಂ ಬ್ರ್ಯಾಂಚ್ ಪೊಲೀಸರಂತೆ ನಟಿಸುತ್ತ ಜ್ಯೋತಿಷಿಯೊಬ್ಬರ ಚಿನ್ನಾಭರಣ ದೋಚಿ ಪರಾರಿಯಾಗಿದ್ದ ಪ್ರಕರಣ ಸೇರಿದಂತೆ ಆಳಂದ ಹಾಗೂ ಶಹಬಾದ್ ಉಪವಿಭಾಗದ ಠಾಣಾ ವ್ಯಾಪ್ತಿಯ 10 ಪ್ರಕರಣಗಳನ್ನು ಜಿಲ್ಲಾ ಪೊಲೀಸರು ಭೇದಿಸಿದ್ದಾರೆ. ಆಳಂದ ತಾಲೂಕಿನ ನರೋಣಾ ಠಾಣಾ ವ್ಯಾಪ್ತಿಯ 1,ಶಹಬಾದ್ ಠಾಣೆ ವ್ಯಾಪ್ತಿಯ 4 ,ವಾಡಿ ಠಾಣೆ 3 ,ಚಿತ್ತಾಪುರ,ಮಾಡಬೂಳ ಠಾಣೆ ವ್ಯಾಪ್ತಿಯ ತಲಾ 1 ಸೇರಿದಂತೆ 10 ಪ್ರಕರಣಗಳಲ್ಲಿ 18 ಆರೋಪಿಗಳನ್ನು ಬಂಧಿಸಲಾಗಿದೆ.

ಚಿನ್ನಾಭರಣ,ನಗದು.ಬೈಕುಗಳು, ಸೇರಿದಂತೆ ಒಟ್ಟು 42.66 ಲಕ್ಷ ಮೌಲ್ಯದ ಸ್ವತ್ತುಗಳನ್ನು ಜಪ್ತಿ ಮಾಡಲಾಗಿದೆ. ಎಂದು ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಅವರು ಪತ್ರಿಕಾ ಗೋಷ್ಠಿಯಲ್ಲಿ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹೆಚ್ಚುವರಿ ಎಸ್ಪಿ ಮಹೇಶ ಮೇಘಣ್ಣನವರ,ಶಹಬಾದ ಡಿವೈಎಸ್‌ಪಿ ಶಂಕರಗೌಡ ಪಾಟೀಲ,ಅಳಂದ ಡಿವೈಎಸ್‌ಪಿ ತಮ್ಮರಾಯ ಪಾಟೀಲ ಅವರು ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು

## ಕೆಪಿಎಸ್‌ಸಿ ಅಕ್ರಮ ಆರೋಪ:ಮಾಜಿ ಅಧ್ಯಕ್ಷ ಶಿವಶಂಕರಪ್ಪ ನಿವಾಸ ಸೇರಿದಂತೆ 21 ಸ್ಥಳಗಳಲ್ಲಿ ಇ.ಡಿ ದಾಳಿ

ಕಲಬುರಗಿ:ಕರ್ನಾಟಕಲೋಕಸೇವಾ ಆಯೋಗದಲ್ಲಿ (ಕೆಪಿಎಸ್‌ಸಿ) ಅಕ್ರಮ ಆರೋಪಕ್ಕೆ ಸಂಬಂಧಿಸಿದ ಹಣ ಅಕ್ರಮ ವರ್ಗಾವಣೆ ತನಿಖೆಯ ಭಾಗವಾಗಿ ಜಾರಿ ನಿರ್ದೇಶನಾಲಯವು ( ಇ.ಡಿ) ಇಂದು ರಾಜ್ಯದ 21 ಕಡೆಗಳಲ್ಲಿ ಶೋಧ ನಡೆಸಿದೆ.ಬೆಂಗಳೂರಿನ 13 ಕಡೆ ರಾಜ್ಯದ 8 ಕಡೆ ಏಕಕಾಲಕ್ಕೆ ದಾಳಿ ನಡೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರ ಕಲಬುರಗಿಯಲ್ಲಿರುವ ಆನಂದ ಹೊಟೇಲ್ ಹತ್ತಿರದ ಮನೆ ,ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವ ನಿವಾಸ ಸೇ–ರಿದಂತೆ ಅವರ ಸ್ನೇಹಿತರ ಮನೆಗಳ ಮೇಲೆ ಏಕಕಾಲದಲ್ಲಿ ಇಡಿ ಅಧಿಕಾ–ರಿಗಳು ದಾಳಿ ನಡೆಸಿದ್ದಾರೆ.

ಕಲಬುರಗಿಯಲ್ಲಿ ಸಿಆಪಿ–ಎಫ್ ಯೋಧರ ಭದ್ರತೆಯೊಂದಿಗೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದು 10 ಕ್ಕೂ ಹೆಚ್ಚು ಅಧಿಕಾರಿಗಳು ತಂಡದಲ್ಲಿದದಾರೆ

ಪಶುವೈದ್ಯಾಧಿಕಾ–ರಿಗಳ ನೇಮಕಾತಿ ಹಗರಣ–ಕ್ಕೆ ಸಂಬಂಧಿಸಿದಂತೆ ಅಕ್ರಮ ಹಣ ವರ್ಗಾವಣೆ ಆರೋಪದಲ್ಲಿ ಶಿವಶಂಕರಪ್ಪ ಸಾಹುಕಾರ್ ವಿರುದ್ಧ ಇಡಿಯಲ್ಲಿ ಪ್ರಕರಣ ದಾಖಲಾಗಿತ್ತು. ತನಿಖೆ ಆರಂಭಿಸಿರುವ ಇಡಿ ಅಧಿಕಾರಿಗಳು ಶಿವಶಂಕರಪ್ಪ ಸಾಹುಕಾರ್ ನಿವಾಸದ ಮೇಲೆ ದಾಳಿ ನಡೆಸಿ ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ.

ಶಿವಶಂಕರಪ್ಪ ಸಾಹುಕಾರ್ ಅವರು ಕೆಪಿಎಸ್‌ಸಿ ಅಧ್ಯಕ್ಷರಾಗಿದ್ದಾಗ ತಮ್ಮ ಅಧಿಕಾರ ಬಳಸಿ ಪುತ್ರಿಗೆ ಸುಳ್ಳು ಆದಾಯ ಪ್ರಮಾಣಪತ್ರ ನೀಡಿ ಉದ್ಯೋಗ ಕೊಡಿಸಲು ಯತ್ನಿಸಿದ್ದಾರೆಂಬ ಆರೋಪದ ಮೇಲೆ ರಾಜ್ಯಪಾಲರಿಂದ ಅಮಾನತುಗೊಂಡಿದ್ದರು.

ಸುಮಾರು 400 ಪಶುವೈದ್ಯಾಧಿಕಾರಿಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಒಎಂಆರ್ ಶೀಟ್ ತಿರುಚಿದ ಗಂಭೀರ ಆರೋಪಕ್ಕೆ ಸಂಬಂಧಿಸಿದಂತೆ ಇವರ ವಿರುದ್ಧ ಎಐಆರ್ ದಾಖಲಾಗಿದೆ.

## ವೈಚಾರಿಕತೆಯ ಆಚರಣೆಗಳು ಇಂದಿನ ಅಗತ್ಯ

ಕಲಬುರಗಿ: ನಾಗರ ಪಂಚಮಿಯಂದು ಅಮೃತಕ್ಕೆ ಸಮನಾದ ಹಾಲು ಮತ್ತು ಆಹಾರವನ್ನು ಕಲ್ಲು, ಮಣ್ಣು ಪಾಲು ಮಾಡುವ ಮೌಢ್ಯತೆಯ ಸಂಪ್ರದಾಯವನ್ನು ಬಿಟ್ಟು, ಬಡ,ಅನಾಥ, ರೋಗಿಗಳು, ಅಸಹಾಯಕರು, ಮಕ್ಕಳಿಗೆ ಇವುಗಳನ್ನು ನೀಡುವ ಮೂಲಕ ಅವರಲ್ಲಿ ದೇವರನ್ನು ಕಾಣುವ ಪ್ರವೃತ್ತಿಯನ್ನು ಬೆಳೆಸಿಕೊಳ್ಳಬೇಕಾದದ್ದು ಇಂದಿನ ಅವಶ್ಯಕತೆಯಾಗಿದೆ. ಪ್ರತಿಯೊಬ್ಬರಲ್ಲಿ ವೈಚಾರಿಕ ಪ್ರಜ್ಞೆ, ಆಚರಣೆಗಳು ಬೆಳೆಸಿಕೊಳ್ಳಬೇಕಾಗಿದೆ ಎಂದು ಉಪನ್ಯಾಸಕ, ಶರಣ ಚಿಂತಕ ಎಚ್.ಬಿ.ಪಾಟೀಲ್ ಹೇಳಿದರು.

ನಗರದ ಪ್ರಭುದೇವ ನಗರದಲ್ಲಿನ 'ಶ್ರೀ ನೀಲಂಠೇಶ್ವರ ಶಾಲೆ'ಯ ಆವರಣದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಸೋಮವಾರ ಏರ್ಪಡಿಸಿದ್ದ 'ಬಸವ ಪಂಚಮಿ'ಯ ನಿಮಿತ್ಯ ಬಡಾವಣೆಯ ಮಕ್ಕಳಿಗೆ ಹಾಲು ಕುಡಿಸುವ ಕಾರ್ಯಕ್ರಮ ಮತ್ತು ಶರಣೆ ಅಕ್ಕನಾಗಮ್ಮನವರ ಜಯಂತಿಯಲ್ಲಿ ಅವರು ಮಾತನಾಡಿದರು.



ಶರಣ ಚಿಂತಕರಾದ ಷಣ್ಮುಖಯ್ಯ ಹಿರೇಮಠ, ಡಾ.ರಾಜಶೇಖರ ಪಾಟೀಲ್, ಶಿವಲಿಂಗಪ್ಪ ಸಂಗೋಳಗಿ ಮಾತನಾಡುತ್ತಾ, ಪ್ರತಿವರ್ಷ ನಾಗರ ಪಂಚಮಿ ನೆಪದಲ್ಲಿ ಲಕ್ಷಾಂತರ ಲೀಟರ ಹಾಲನ್ನು ಹುತ್ತಕ್ಕೆ ಮತ್ತು ನಾಗ ಪ್ರತಿಮೆಗಳಿಗೆ ಸುರಿದು ಅನಾವಶ್ಯಕವಾಗಿ ಹಾಳು ಮಾಡಲಾಗುತ್ತಿದೆ. ವೈಜ್ಞಾನಿಕ ಯುಗದಲ್ಲಿ ಇಂತಹ ಮೂಢನಂಬಿಕೆ ಆಚರಿಸಬಾರದು. ಶರಣೆ ಅಕ್ಕನಾಗಮ್ಮನವರ ಕೊಡುಗೆ ಅನನ್ಯವಾಗಿದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಶಿವಯೋಗೆಪ್ಪಾ ಎಸ್.ಬಿರಾದಾರ, ದಿನೇಶ್ ಮಿಶ್ರಾ, ಪಂಡಿತರಾವ ಪಾಟೀಲ್, ಗುಂಡೇರಾವ್ ಪಾಟೀಲ್, ಸಂಗಣ್ಣ ಪಾಟೀಲ್, ಮಂಜುನಾಥ ಅಂಬಾಜಿ, ಸಂಗಮೇಶ ಕಡಗಂಚಿ, ಗುಂಡುರಾವ್ ಶೀಲವಂತ, ರಾಚಣ್ಣ, ಈರಣ್ಣ ಸೇರಿದಂತೆ ಬಡಾವಣೆಯ ಅನೇಕರು ಭಾಗವಹಿಸಿದ್ದರು.

## ಹಬ್ಬಗಳಲ್ಲಿ ಮೂಢನಂಬಿಕೆ ಹೊಗಲಾಡಿಸಿ ಶ್ರದ್ದೆ, ನಂಬಿಕೆ ಇಂದ ಆಚರಣೆ ಮಾಡಿ

ಕಲಬುರಗಿ:ಬಸವ ಪಂಚಮಿ ಅಂಗವಾಗಿ ಕಲಬುರಗಿ ನಗರದ ವಿವಿಧ ಬಡಾವಣೆಗಳಲ್ಲಿ ಬಡ ಮಕ್ಕಳಿಗೆ ಹಾಲುಣಿಸುವ ಮೂಲಕ ಹಬ್ಬಗಳನ್ನು ವೈಚಾರಿಕವಾಗಿ ಶ್ರದ್ಧೆ, ನಂಬಿಕೆ ಮೂಲಕ ಆಚರಿಸಿ ಮೂಢನಂಬಿಕೆಗಳನ್ನು ಹೋಗಲಾಡಿಸಬೇಕೆಂದು ಕರೆ ನೀಡಲಾಯಿತು.

ಮಾನವ ಬಂಧುತ್ವ ವೇದಿಕೆ ಕರ್ನಾಟಕ ಕಲ್ಯಾಣ ಕರ್ನಾಟಕ ಜನ ಜಾಗೃತಿ ವೇದಿಕೆ ಕಲಬುರಗಿ ಸ್ಲಂ ಜನರ ಸಂಘಟನೆ ಕರ್ನಾಟಕ ರಕ್ಷಿತಾ ಇಂಟಿಗ್ರೇಟೆಡ್ ರೂರಲ್ & ಅರ್ಬನ್ ಡೆವಲಮೆಂಟ್ ಸೊಸೈಟಿ ಕಲಬುರಗಿ ಇವರ ಸಂಯುಕ್ತ ಆಶ್ರಯದಲ್ಲಿ ಕಲಬುರಗಿ ನಗರದ ವಿವಿಧ ಬಡಾವಣೆಯಲ್ಲಿ ಮಕ್ಕಳಿಗೆ ಹಾಲುಣಿಸುವ ಮೂಲಕ ಸಂಘಟಕರು ಸಾರ್ವಜನಿಕರಿಗೆ ಕರೆ ನೀಡಿದರು.


ಮಾನವ ಬಂಧುತ್ವ ವೇದಿಕೆಯು ರಾಜ್ಯಾದ್ಯಂತ ಕಳೆದ 12 ವರ್ಷಗಳಿಂದ ವೈಚಾರಿಕ,ವೈಜ್ಞಾನಿಕ, ಮಾನವೀಯತೆ ಮೌಲ್ಯಗಳನ್ನು ಬೆಳೆಸುತ್ತಾ ಮೂಢನಂಬಿಕೆ, ಕಂದಚಾರ ವಿರುದ್ಧ ಅರಿವಿನ ಬೆಳಕು ಪ್ರಚಾರಪಡಿಸುತ್ತಿದೆ. ಊಣಠಡಿಥಿ ಶ್ರದ್ದೆ, ನಂಬಿಕೆ ಆರಾಧನೆ ಆಚರಣೆಯ ಹೆಸರಿನಲ್ಲಿ

ಪೌಷ್ಠಿಕ ಆಹಾರ ಪದಾರ್ಥಗಳನ್ನು ವ್ಯರ್ಥ ಮಾಡದೆ ನೆಲಕ್ಕೆ ಚೆಲ್ಲದೆ ಬಡವರಿಗೆ ಅಸಹಾಯಕರಿಗೆ ನೀಡಿ ಹಬ್ಬಗಳು ಅರ್ಥಪೂರ್ಣವಾಗಿ ಆಚರಿಸುವಂತೆ ಬಂಧುತ್ವ ವೇದಿಕೆ ನಿರಂತರ ಪ್ರಯತ್ನ ಮಾಡುತ್ತಿದೆ. ಬಸವ ಪಂಚಮಿ ದಿನದಂದು ಪೌಷ್ಠಿಕವಾದ ಹಾಲು ಕಲ್ಲು ಹಾವಿಗೆ ಹಾಲು ಎರೆಯುವ ಹಾಗೂ ಅಂ–ಧಶ್ರದ್ಧೆಗಳನ್ನು ಆಚರಿಸುವ ಮೂಢನಂಬಿಕೆಗಳ ವಿರೋಧವಾಗಿ ಜಾಗೃತಿ ಮೂಡಿಸಿ. ಹಾಲು ಪೋಲು ಮಾಡುವುದನ್ನು ತಡೆದು, ಸಮಾಜದಲ್ಲಿ ಹಸಿವಿನಿಂದ ಬಳಲುತ್ತಿರುವ ಬಡ ಮಕ್ಕಳಿಗೆ ಆಪೌಷ್ಟಿಕ ಮಕ್ಕಳಿಗೆ ಹಾಲು ಹಂಚುವನಂತೆ ಜನರಲ್ಲಿ ಅರಿವು ಮೂಡಿಸುತ್ತಿದೆ. ವೈಜ್ಞಾನಿಕವಾಗಿ ಹಾವುಗಳು ಸರಿಸೃಪ (ಡಿಜಠಿಣಟಜ) ಪ್ರಬೇಧಕ್ಕೆ ಸೇರಿವೆ. ಅವುಗಳು ಸಸ್ತನಿಗಳಲ್ಲದ ಕಾರಣ, ಹಾಲನ್ನು ಜೀರ್ಣಿಸಿಕೊಳ್ಳಲು ಅಗತ್ಯವಿರುವ 'ಲ್ಯಾಕ್ಟೇಸ್' (ಐಚಿಛಿಣಚಿಜ) ಕಿಣ್ವವು ಅವುಗಳ ದೇಹದಲ್ಲಿ ಇರುವುದಿಲ್ಲ. ಹಾವು ಹಾಲನ್ನು ಕುಡಿದರೆ ಅದಕ್ಕೆ ಅಜೀರ್ಣವಾಗಿ, ಶ್ವಾಸಕೋಶಕ್ಕೆ ತೊಂದರೆಯಾಗಿ ಸಾವನ್ನಪ್ಪುವ ಸಾಧ್ಯತೆಯೇ ಹೆಚ್ಚು.ಹಾಗೆಯೇ ಹುತ್ತಕ್ಕೆ ಹಾಲು ಹಾಕುವುದರಿಂದ ಯಾವುದೇ ಪ್ರಯೋಜನವಿಲ್ಲ. ಬದಲಾಗಿ ಅದರಿಂದ ಪರಿಸರಕ್ಕೆ ಮತ್ತು ಹಾವುಗಳಿಗೆ ಹಾನಿಯೇ ಹೆಚ್ಚು, ಹಾಲು ಒಣಗಿದ ನಂತರ ಹುತ್ತದ ಸುತ್ತ ಇರುವೆಗಳು ಮತ್ತು ವಿಷಕಾರಿ ಕೀಟಗಳು ಆಕರ್ಷಿತವಾಗುತ್ತವೆ. ಇವು ಹುತ್ತದೊಳಗಿರುವ ಹಾವಿಗೆ ಕಚ್ಚಿ ತೊಂದರೆ ಕೊಡುತ್ತವೆ. ಕುಡಿಯಲು ಯೋಗ್ಯವಾದ ಹಾಲನ್ನು ಮಣ್ಣಿಗೆ ಸುರಿಯುವುದರಿಂದ ಅಮೂಲ್ಯವಾದ ಆಹಾರ ಪದಾರ್ಥ ವ್ಯರ್ಥ ಮಾಡದೇ ಆ ಹಾಲನ್ನು ಬಡ ಮಕ್ಕಳಿಗೆ ಅಥವಾ ಪೌಷ್ಠಿಕಾಂಶದ ಕೊರತೆಯಿರುವ ಮಕ್ಕಳಿಗೆ ನೀಡಿ ಮಾನವೀಯತೆ ಮೆರೆಯುವುದು ಬಸವ ಪಂಚಮಿ ಆಚರಣೆ ಮಾಡಬೇಕೆಂದರು. ನಗರದ ಪಂಚಶೀಲ ಬಡಾವಣೆ, ಸೀದ್ಧಾರ್ಥ ಶ್ರವಣ ನ್ಯೂನತೆಯುಳ್ಳ ಬಾಲಕ ಬಾಲಕಿಂ–ಯರ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಸೇಡಂ ರಸ್ತೆ, ರಾಜಾಪುರ ಅಲೆಮಾರಿ ಬಡಾವಣೆ, ಬೀದಾಪುರ ಅನಾಥಾಶ್ರಮದಲ್ಲಿ ಬಸವ ಪಂಚಮಿ ಕಾರ್ಯಕ್ರಮ ಆಚರಿಸಲಾಯಿತು.ಈ ಕಾರ್ಯಕ್ರಮದಲ್ಲಿ ಮಾನವ ಬಂಧುತ್ವ ವೇದಿಕೆ ವಿಭಾಗೀಯ ಸಂಚಾಲಕರಾದ ಸುನಿಲ ಮಾರುತಿ ಮಾನಪಡೆ, ಜಿಲ್ಲಾ ಸಂಚಾಲಕರಾದ ನಾಗೇಂದ್ರ ಜವಳಿ ಕಲ್ಯಾಣ ಕರ್ನಾಟಕ ಜನ ಜಾಗೃತಿ ವೇದಿಕೆ ಅಧ್ಯಕ್ಷರಾದ ಗುರಣ್ಣಾ ಐನಾಪುರ, ಮಲ್ಲಿಕಾರ್ಜುನ ಕೇರಿ ಅಂಬಲಗಾ, ಸ್ಲಂ ಜನರ ಸಂಘಟನೆ ಕಲಬುರಗಿಯ ಜಿಲ್ಲಾ ಸಂಚಾಲಕರಾದ ಅಲ್ಲಮಪ್ರಭು ನಿಂಬರ್ಗಾ, ಅಂಬರೀಶ್ ಇಟ್ಟಗಿಕರ, ಬ್ರಹ್ಮನಂದ ಮಿಂಚಾ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರಾದ ಸಂಜೀವಕುಮಾರ ಕಾಂಬ್ಳೆ, ರಕ್ಷಿತಾ ಇಂಟಿಗ್ರೇಟೆಡ್ ರೂರಲ್ ಅಂಡ್ ಅರ್ಬನ್ ಡೆವಲಮೆಂಟ್ ಸೊಸೈಟಿಯ ನಿರ್ದೇಶಕರಾದ ಸುರೇಶ ಕಟ್ಟಿಮನಿ, ಹೊರಗುತ್ತಿಗೆ ನೌಕರರ ಸಂಘದ ನಾರಾಯಣ ರಂಗದಾಳ, ಸಿದ್ದಲಿಂಗ ಪಾಳ,ಶಿವಕುಮಾರ ಸಂತ್ರವಾಡಿ ಇತರರು ಇದ್ದರು.

# ಮನಸುಗಳೇಕೆ ವಿಕೃತಗೊಳ್ಳುತ್ತಿವೆ.!

■ ಉದಯರಶ್ಮಿ ದಿನಪತ್ರಿಕೆ

**ಭಾವರಶ್ಮಿ**




ಈಗಿನ ದಿನಮಾನದಲ್ಲಿ ಹಿಂಸೆ, ಕೊಲೆ ಅತ್ಯಾಚಾರ ಇವುಗಳು ಹೆಚ್ಚಿವೆ. ಪ್ರಿಯಕರನ ನೆರವಿನಿಂದ ಪತಿಯನ್ನೇ ಕೊಲ್ಲಿಸುವುದು, ಅಡ್ಡಿಯಾಗುತ್ತಾರೆಂದು ಎಳೆ ಮಕ್ಕಳನ್ನೇ ಸಾಯಿಸುವುದು, ಅಸಹಾ ಯಕತೆ, ದೌರ್ಬಲ್ಯಗಳನ್ನು ದುರುಪಯೋಗಿಸಿಕೊಂಡು ಲೈಂಗಿಕ ದೌರ್ಜನ್ಯ ವೆಸಗುವುದು, ಚಿಕ್ಕ ಮಕ್ಕಳ ಮೇಲಿನ ಅತ್ಯಾಚಾರ, ದುರ್ಬಲರನ್ನು ಹಿಂಸಿಸಿ ಆನಂದಿಸುವುದು ಮುಂತಾದ ಸುದ್ದಿಗಳು ದಿನಬೆಳಗಾದರೆ ರಾಚುತ್ತಿರುತ್ತವೆ. ಒಂದೇ, ಎರಡೇ ವಿಕೃತಿಯ



ನೂರಾರು ಉದಾಹರಣೆಗಳನ್ನು ಕೊಡಬಹುದು. ಮನುಜ ತಾನು ಬೆಳೆದ ವಾತಾವರಣದ ಪರಿಣಾಮವೇ ಅಥ–ವಾ ಹುಟ್ಟಿದಾಗಿನಿಂದ ಬಂದ ಸ್ವಭಾವವೇ ಎಂಬುದು ಇಲ್ಲಿ ಪ್ರಸ್ತುತ. ಇನ್ನೊಬ್ಬರಿಗೆ ಆಗುವ ಹಿಂಸೆ, ಅವಮಾನಗಳನ್ನು ಕಂಡು ಸಂತೋಷಿಸುವುದು, ಸ್ವತಃ ಹಿಂಸೆ ನೀಡಿ, ಅವಮಾನಿಸಿ ಸಂತೋಷಿಸುವುದೇ ವಿಕೃತಿ. ಈ ವಿಕೃತಿ ಮನುಷ್ಯನ ಅಂತರ್ಗತ ಸ್ವಭಾವವಾಗಿದ್ದು, ವಿಕೃತಿಯ ಕ್ರೂರ ಪರಾಕಾಷ್ಠೆಯೆಂದರೆ ಚಿತ್ರವಿಚಿತ್ರ ಹಿಂಸೆ ನೀಡಿ ಕೊಲ್ಲುವುದು, ಲೈಂಗಿಕವಾಗಿ ಶೋಷಿಸಿ ಹತ್ಯೆಗೈಯುವುದು ಇತ್ಯಾದಿ. ವಿಕೃತಿಗೆ ಅಸೂಯೆಯೂ ಒಂದು ಕಾರಣವಾಗಿದೆ.

ಕೆಲವು ಬಾರಿ ನಮಗೆ ತಿಳಿಯದೆ ಇನ್ನೊಬ್ಬರನ್ನು ನೋಯಿಸಿರುತ್ತೇವೆ. ಎಲ್ಲೋ ಜನನಿಬಿಡ ಪ್ರದೇಶದಲ್ಲಿ ತಮ್ಮದೇ ಯೋಚನೆಯಲ್ಲಿ ಮುಳುಗಿ ಕಾಲು ಚಾಚಿ ಕುಳಿತಿರುತ್ತೇವೆ. ಯಾರೋ ಅವಸರದಲ್ಲಿ ಓಡಿ ಹೋಗುತ್ತಿರುತ್ತಾರೆ. ನಮ್ಮ ಕಾಲು ಎಡತಾಕಿ ಬೀಳುತ್ತಾರೆ. ಅವರು ನೋವಿನಿಂದ ಬಳಲುತ್ತಿದ್ದರೆ ನಾವು ಒದ್ದಾಡಿ ಹೋಗುತ್ತೇವೆ. ನಿಮಿಷದಲ್ಲೇ ಹಲವಾರು ಬಾರಿ ಕ್ಷಮಿಸಿ ಎನ್ನುತ್ತೇವೆ. ಅವರು ಪರವಾಗಿಲ್ಲ ಎಂದರೂ, ಅವರ ನೋವು ನಮಗೆ ಸಂಕಟ ತರುತ್ತದೆ. ಇದು ಆರೋಗ್ಯಕರ ಮನಸ್ಸು. ಹಾಗಾಗಿ ನಮಗೆ ಮತ್ತೊಬ್ಬರ ದುಃಖ–ದುಮ್ಮಾನಗಳು ಮನವ–ರಿಕೆಯಾಗುತ್ತವೆ. ನಾವೂ ಮತ್ತೊಬ್ಬರ ಸ್ಥಾನದಲ್ಲಿ ನಿಂತು ಯೋಚಿಸಿರುತ್ತೇವೆ. ಆದರೆ ವಿಕೃತ



ಮನಸ್ಸು ಇದಕ್ಕೆ ವಿರುದ್ಧವಾಗಿಯೇ ಕೆಲಸ ಮಾಡುತ್ತದೆ. ಮಾನವ ಮನಸ್ಸು ಒಂದು ಸಂಕೀರ್ಣವಾದ ಕ್ಷೇತ್ರವಾಗಿದ್ದು, ಇದು ಆರೋಗ್ಯಕರ ಹಾಗೂ ಅನಾರೋಗ್ಯಕರವಾದ ನಾನಾ ಬಗೆಯ ಆಲೋಚನೆಗಳನ್ನು ಹುಟ್ಟುಹಾಕುವ ಸಾಮರ್ಥ್ಯವನ್ನು ಹೊಂದಿದೆ. ಇವುಗಳಲ್ಲಿ ವಿಕೃತ ಆಲೋಚನೆಗಳೂ ಸೇರಿವೆ. ಇವು ವಿರೂಪಗೊಂಡ, ಅನಪೇಕ್ಷಿತ ವಾಗಿ ನುಗ್ಗಿ ಬರುವ ಮತ್ತು ಸಾಮಾನ್ಯವಾಗಿ ನಿಷಿದ್ಧವೆಂದು ಪರಿಗಣಿ ಸಲ್ಪಡುವ ವಿಷಯಗಳನ್ನು ಒಳಗೊಂಡಿರುತ್ತವೆ. ವ್ಯಕ್ತಿಗಳು ಎದುರಿಸಬಹುದಾದ ಮಾನಸಿಕ ಸಂಕೀರ್ಣತೆಗಳನ್ನು ಅರ್ಥಮಾಡಿ ಕೊಳ್ಳಲು, ವಿಕೃತ ಆಲೋಚನೆಗಳು ಮತ್ತು ಮಾನಸಿಕ ಆರೋಗ್ಯದ ನಡುವಿನ ಸಂಬಂಧವನ್ನು ಪರಿಶೀಲಿ ಸುವುದು ಅತ್ಯಗತ್ಯವಾಗಿರುತ್ತದೆ. ಹದಿಮೂರು ವರ್ಷದ ಬಾಲಕಿಂ–ಯ ಮೇಲಾದ ಅತ್ಯಾಚಾರದ ಬಗ್ಗೆ ಮನೋರೋಗ ತಜ್ಞರಲ್ಲಿ ವಿಚಾ–ರಿಸಿದಾಗ ಅವರು ಹೇಳಿದ್ದು ಅವ–ರಿಗೆ ಬೇಕಾಗಿರುವುದು ಚಿಕಿತ್ಸೆಯಲ್ಲ ಕಠಿಣ ಶಿಕ್ಷೆ ಎನ್ನುತ್ತಾರೆ.

ವಿಕೃತ ಆಲೋಚನೆಗಳು ತೀವ್ರ ಅಸ್ವಸ್ಥತೆ ಮತ್ತು ಸಂಕಟವನ್ನು ಉಂಟುಮಾಡುವಂತಹ, ತೊಂದರೆದಾಯಕ ಹಾಗೂ ಅನುಚಿತವಾದ ವಿಚಾರಗಳನ್ನು ಒಳಗೊಂಡಿರುತ್ತವೆ. ಆಲೋಚನೆಗಳು ಮತ್ತು ಕ್ರಿಯೆಗಳ ನಡುವಿನ ವ್ಯತ್ಯಾಸವನ್ನು ಗುರುತಿಸುವುದು ಮುಖ್ಯ ಏಕೆಂದರೆ, ವಿಕೃತ ಆಲೋಚನೆಗಳನ್ನು ಹೊಂದಿರುವುದು ಹಾನಿಕಾರಕ ನಡವಳಿಕೆಗಳತ್ತ ಒಲವು ಇರುವುದನ್ನು ಸೂಚಿಸಬೇಕೆಂದೇನಿಲ್ಲ. ಇಂತಹ ಆಲೋಚನೆಗಳು ಲೈಂಗಿಕ ವಿಷಯಗಳ ಬಗೆಗಿನ ಅತಿಯಾದ ವ್ಯಾಮೋಹ, ಹಿಂಸಾತ್ಮಕ ಕಲ್ಪನೆಗಳು ಅಥವಾ ಸಾಮಾಜಿ–ಕವಾಗಿ ಸ್ವೀಕಾರಾರ್ಹವಲ್ಲದ ಪ್ರವೃತ್ತಿಗಳಂತಹ ವಿವಿಧ ರೂಪಗಳಲ್ಲಿ ವ್ಯಕ್ತವಾಗಬಹುದು. ಕೊನೆಯದಾಗಿ, ವಿಕೃತ ಆಲೋಚನೆಗಳು, ದುಃಖಕರ ಮತ್ತು ಸವಾಲಿನದ್ದಾಗಿದ್ದರೂ, ವ್ಯಕ್ತಿಯ ಪಾತ್ರ ಅಥವಾ ನೈತಿ–ಕತೆಯನ್ನು ವ್ಯಾಖ್ಯಾನಿಸುವುದಿಲ್ಲ. ಮಾನಸಿಕ ಆರೋಗ್ಯ ಮತ್ತು ವಿಕೃತ ಚಿಂತನೆಯ ಗ್ರಹಿಸಿ ಅರ್ಥಮಾಡಿಕೊಳ್ಳುವುದು ಸಹಾನುಭೂತಿ, ಬೆಂಬಲ ಮತ್ತು ಪರಿಣಾಮಕಾರಿ ಮಧ್ಯಸ್ಥಿಕೆಗಳನ್ನು ಬೆಳೆಸಲು ಅತ್ಯಗತ್ಯ. ವೃತ್ತಿಪರ ಸಹಾಯವನ್ನು ಪಡೆಯುವ ಮೂಲಕ, ಸ್ವ–ಆರೈಕೆ ಅಭ್ಯಾಸಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಮತ್ತು ಬೆಂಬಲ ಜಾಲವನ್ನು ನಿರ್ಮಿಸುವ ಮೂಲಕ, ವಿಕೃತ ಆಲೋಚನೆಗಳನ್ನು ಅನುಭವಿಸುವ ವ್ಯಕ್ತಿಗಳು ತಮ್ಮ ಮಾನಸಿಕ ಆರೋಗ್ಯ ಪ್ರಯಾಣವನ್ನು ಸ್ಥಿತಿಸ್ಥಾಪಕತ್ವ ಮತ್ತು ಭರವಸೆಯೊಂದಿಗೆ ನಿರ್ವಹಣೆ ಮಾಡಬಹುದು. ಮುಕ್ತ ಸಂವಾದವನ್ನು ಪ್ರೋತ್ಸಾಹಿಸುವ, ಮಾನಸಿಕ ಆರೋಗ್ಯದ ಸವಾಲುಗಳನ್ನು ಕಳಂಕಿತಗೊಳಿಸುವ ಮತ್ತು ಬೆಂಬಲದ ಅಗತ್ಯವಿರುವವರಿಗೆ ಸುರಕ್ಷಿತ ಸ್ಥಳವನ್ನು ಒದಗಿಸುವ ಸಹಾನುಭೂತಿಯ ಮತ್ತು ಅಂತರ್ಗತ ಸಮಾಜವನ್ನು ಬೆಳೆಸುವುದು ಅಗತ್ಯ ಅಲ್ಲವೇ!


ಲೇಖನ
– ರೇಖಾ ಶಂಕರ್.
ನಿರ್ವಾಹಕಿ
'ನಮ್ಮ ಕಥಾ ಅರಮನೆ'




# ವಿಬಿ ಜಿ ರಾಮ್ ಜಿ ಕಾಮಗಾರಿಗಳಿಗೆ ವೇಗ ನೀಡಲು ಸಿಇಒ ಸೂಚನೆ

■ ಉದಯರಶ್ಮಿ ದಿನಪತ್ರಿಕೆ



**■ ವಿಜಯಪುರ ತಾಲ್ಲೂಕಿನ ಗ್ರಾಪಂಗಳಿಗೆ ಸಿಇಒ ರಿಷಿ ಆನಂದ ದಿಢೀರ್ ಭೇಟಿ । ಬೆಳಗ್ಗೆಯಿಂದಲೇ ಕ್ಷೇತ್ರ ಪರಿಶೀಲನೆ । ಸಿಬ್ಬಂದಿ ಹಾಜರಾತಿ, ವಿಬಿ-ಜಿ ರಾಮ್-ಜಿ ಕಾಮಗಾರಿಗಳ ಪರಿಶೀಲನೆ । ಗ್ರಾಮೀಣ ಅಭಿವೃದ್ಧಿಗೆ ವೇಗ ನೀಡಲು ಕಟ್ಟುನಿಟ್ಟಿನ ಸೂಚನೆ**

ವಿಜಯಪುರ: ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗ ರಿಷಿ ಆನಂದ ಅವರು ಸೋಮವಾರ ಬೆಳ್ಳಂಬೆಳಗ್ಗೆ 8 ಗಂಟೆಯಿಂದಲೇ ಕ್ಷೇತ್ರ ಭೇಟಿ ಆರಂಭಿಸಿ, ವಿಜಯಪುರ ತಾಲ್ಲೂಕಿನ ಐನಾಪುರ, ಮದಭಾವಿ, ಹೊನ್ನುಟಗಿ ಹಾಗೂ ಆಹೇರಿ ಗ್ರಾಮ ಪಂಚಾಯತಿಗಳಿಗೆ ದಿಢೀರ್ ಭೇಟಿ ನೀಡಿ, ಪಂಚಾಯಿತಿ ಆಡಳಿತ, ಅಧಿಕಾರಿ–ಸಿಬ್ಬಂದಿ ಹಾಜರಾತಿ, ಸಾರ್ವಜನಿಕ ಸೇವೆ, ವಿಬಿ–ಜಿ ರಾಮ್–ಜಿ ಯೋಜನೆಯ ಅನುಷ್ಠಾನ ಹಾಗೂ ವಿವಿಧ ಗ್ರಾಮೀಣ ಅಭಿವೃದ್ಧಿ ಕಾಮಗಾರಿಗಳ ಪ್ರಗತಿಯನ್ನು ಸ್ಥಳದಲ್ಲಿಯೇ ಪರಿಶೀಲಿಸಿದರು.

ಸಿಇಒ ಅವರು ಕಚೇರಿ ವೇಳೆಯ ಆರಂಭಕ್ಕೂ ಮುನ್ನವೇ ಕ್ಷೇತ್ರಕ್ಕೆ ತೆರಳಿ ಗ್ರಾಮ ಪಂಚಾಯಿತಿಗಳ ಕಾರ್ಯನಿರ್ವಹಣೆ ಹಾಗೂ ಅಭಿವೃದ್ಧಿ ಕಾಮಗಾರಿಗಳ ವಾಸ್ತವ ಸ್ಥಿತಿಯನ್ನು ಪರಿಶೀಲಿಸಿರುವುದು, ಗ್ರಾಮೀಣ ಅಭಿವೃದ್ಧಿ ಕಾರ್ಯಗಳಿಗೆ ಅವರು ನೀಡುತ್ತಿರುವ ಆದ್ಯತೆ ಹಾಗೂ ಆಡಳಿತದಲ್ಲಿ ಸಮಯಪಾಲನೆ ಮತ್ತು ಜವಾಬ್ದಾರಿತನಕ್ಕೆ ಒತ್ತು ನೀಡುತ್ತಿರುವುದನ್ನು ಪ್ರತಿಬಿಂಬಿಸಿತು. ದಿಢೀರ್ ಪರಿಶೀಲನೆಯ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಅಧಿಕಾರಿ– ಸಿಬ್ಬಂದಿಯ ಕರ್ತವ್ಯನಿಷ್ಠೆ, ಹಾಜರಾತಿ ಹಾಗೂ ಸಾರ್ವಜನಿಕ ಸೇವೆಯ ಸ್ಥಿತಿಗತಿಗಳನ್ನು ಪರಿಶೀಲಿಸಿದ ಅವರು, ಗ್ರಾಮ ಪಂಚಾಯಿತಿಗಳು ಸರ್ಕಾರದ ಯೋಜನೆಗಳ ಅನುಷ್ಠಾನ ಮತ್ತು ಸಾರ್ವಜನಿಕ ಸೇವೆಯ ಪ್ರಮುಖ ಕೇಂದ್ರಗಳಾಗಿರುವುದರಿಂದ ಅಧಿಕಾರಿ– ಸಿಬ್ಬಂದಿ ನಿಯಮಿತವಾಗಿ ಕರ್ತವ್ಯಕ್ಕೆ ಹಾಜರಿದ್ದು, ಸಾರ್ವಜನಿಕರ ಸಮಸ್ಯೆಗಳಿಗೆ ತ್ವ–ರಿತವಾಗಿ ಸ್ಪಂದಿಸಬೇಕು ಎಂದು ಸೂಚಿಸಿದರು.

ಎಲ್ಲ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿದ ಸಿಇಒ ಅವರು ಕಚೇರಿಯ ಕಾರ್ಯನಿರ್ವಹಣೆ ಹಾಗೂ ಸಿಬ್ಬಂದಿಯ ಹಾಜರಾತಿಯನ್ನು ಪರಿಶೀಲಿಸಿದರು.

ಸರ್ಕಾರಿ ಕಚೇರಿಗಳಲ್ಲಿ ಶಿಸ್ತು, ಸಮಯಪಾಲನೆ ಮತ್ತು ಕರ್ತವ್ಯನಿಷ್ಠೆ ಅತ್ಯಂತ ಮುಖ್ಯವಾಗಿದ್ದು, ಸಾರ್ವಜನಿಕ ಸೇವೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯಕ್ಕೆ ಅವಕಾಶವಿಲ್ಲ ಎಂದು ಸ್ಪಷ್ಟಪಡಿಸಿದರು. ಗ್ರಾಮ ಪಂಚಾಯಿತಿ ಕಚೇರಿಗೆ ಬರುವ ಸಾರ್ವಜನಿಕರು ಯಾವುದೇ ಕಾರಣಕ್ಕೂ ಅನಗತ್ಯವಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ಅರ್ಜಿಗಳು, ಮನವಿಗಳು ಹಾಗೂ ಸರ್ಕಾರದ ಯೋಜನೆಗಳಿಗೆ ಸಂಬಂಧಿಸಿದ ವಿಚಾರಗಳನ್ನು ನಿಯಮಾನುಸಾರ ತ್ವರಿತವಾಗಿ ವಿಲೇವಾರಿ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರೊಂದಿಗೆ ನೇರವಾಗಿ ಸಂವಾದ ನಡೆಸಿ, ಗ್ರಾಮದಲ್ಲಿ ಅನುಷ್ಠಾನಗೊಳ್ಳುತ್ತಿರುವ ಸರ್ಕಾರಿ ಯೋಜನೆಗಳು ಹಾಗೂ ವಿಬಿ–ಜಿ ರಾಮ್–ಜಿ ಯೋಜನೆಯಡಿ ದೊರೆಯುವ ಉದ್ಯೋಗಾವಕಾಶಗಳ ಕುರಿತು ಮಾಹಿತಿ ಪಡೆದರು. ವಿಶೇಷವಾಗಿ ಐಇಸಿ ಚಟುವಟಿ–ಕೆಗಳನ್ನು ಪರಿಣಾಮಕಾರಿಯಾಗಿ ಕೈಗೊಂಡು, ಗ್ರಾಮಗಳಲ್ಲಿ ವ್ಯಾಪಕ ಜಾಗೃತಿ ಮೂಡಿಸುವ ಮೂಲಕ ಹೆಚ್ಚಿನ ಸಂಖ್ಯೆಯ ಕೂಲಿ ಕಾರ್ಮಿಕರನ್ನು ಕಾಮಗಾರಿಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಬಹುಹಳ್ಳಿ ಕುಡಿಯುವ ನೀರಿನ ಸಮಸ್ಯೆಯನ್ನು ಸಿಇಒ ಅವರ ಗಮನಕ್ಕೆ ತಂದಿದ್ದು, ಸಮಸ್ಯೆಯ ಕು–ರಿತು ಅಗತ್ಯ ಮಾಹಿತಿ ಪಡೆದುಕೊಂಡ ಅವರು, ಸಂಬಂಧಿಸಿದ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಸರ್ಕಾರದ ಯೋಜನೆಗಳ ಅನುಷ್ಠಾನವು ಕೇವಲ ದಾಖಲೆಗಳು ಮತ್ತು ಪ್ರಗತಿ ವರದಿಗಳಿಗೆ ಸೀಮಿತವಾಗಬಾರದು. ಯೋಜನೆಯ ನೈಜ ಪ್ರಯೋಜನ ಅರ್ಹ ಫಲಾನುಭವಿಗಳಿಗೆ ತಲುಪುವಂತಾಗಬೇಕು ಎಂದು ಸಿಇಒ ರಿಷಿ ಆನಂದ ಅವರು ಅಧಿಕಾ–ರಿಗಳಿಗೆ ಸ್ಪಷ್ಟ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಗುರುಶಾಂತಪ್ಪ ಬೆಳ್ಳುಂಡಗಿ, ಸಹಾಯಕ ನಿರ್ದೇಶಕರಾದ ಎಸ್.ಆರ್. ಕಟ್ಟಿ, ಹೊನ್ನುಟಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸುಧಾ ರೆಬಿನಾಳ, ಆಹೇರಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಲ್ಲಿಕಾರ್ಜುನ ಮಾದರ, ತಾಂತ್ರಿಕ ಸಂಯೋಜಕರಾದ ಪರಶುರಾಮ ಶಹಾಪುರ ಹಾಗೂ ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

# ದ್ವಿಭಾಷಾ ಶಿಕ್ಷಣನೀತಿ ಮರುಪರಿಶೀಲನೆಗೆ ರಾಷ್ಟ್ರಪತಿಗಳಿಗೆ ಮನವಿ

ಕಲಬುರಗಿ: ಕರ್ನಾಟಕದ ಸರ್ಕಾರಿ ಶಾಲೆಗಳಲ್ಲಿ ಐದನೇ ತರಗತಿಯವರೆಗೆ ಜಾ–ರಿಗೊಳಿಸಿರುವ ದ್ವಿಭಾಷಾ ಶಿಕ್ಷಣ ನೀತಿಯನ್ನು ಮರುಪರಿಶೀಲಿಸಿ, ಕನ್ನಡ ಮಾಧ್ಯಮ ಶಿಕ್ಷಣ–ಕ್ಕೆ ಆದ್ಯತೆ ನೀಡುವಂತೆ ಆಗ್ರಹಿಸಿ ಅಖಿಲ ಭಾರತೀಯ ಸಾಹಿತ್ಯ ಪರಿಷತ್, ಕರ್ನಾಟಕದ ಪದಾಧಿಕಾರಿಗಳಾದ ಶಿವಶರಣ ಗೋಡ್ರಾಳ್, ಅನಿಲ್ ಕುಮಾರ ಸಕ್ರಿ, ವಿನುತ ಜೋಶಿ ಹಾಗೂ ನಾಗವೇಣಿ ಅವರು ಕಲಬುರಗಿ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ಕರ್ನಾಟಕ ಸರ್ಕಾರವು 2026–27ನೇ ಶೈಕ್ಷಣಿಕ ವರ್ಷದಿಂದ 15 ಜಿಲ್ಲೆಗಳ ಸರ್ಕಾರಿ ಶಾಲೆಗಳಲ್ಲಿ ಐದನೇ ತರಗತಿಯವರೆಗೆ ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮಗಳಲ್ಲಿ ದ್ವಿಭಾಷಾ ಬೋಧನೆ ಜಾರಿಗೊಳಿಸಿರುವುದ–ರಿಂದ ಉಂಟಾಗಬಹುದಾದ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಪರಿಣಾಮಗಳ ಕುರಿತು ಮನವಿಯಲ್ಲಿ ಗಮನ ಸೆಳೆಯಲಾಗಿದೆ.

ಕನ್ನಡ ಮಾಧ್ಯಮದಲ್ಲಿ ಬೋಧಿಸುತ್ತಿರುವ ಶಿಕ್ಷಕರಿಗೆ ಇಂಗ್ಲಿಷ್‌ನಲ್ಲಿ ಬೋಧಿಸಲು ತರಬೇತಿ ನೀಡಿರುವುದು, ಕೆಲವು ವಿಷಯಗಳಲ್ಲಿ ಇಂಗ್ಲಿಷ್‌ಗೆ ಹೆಚ್ಚಿನ ಆದ್ಯತೆ ನೀಡಿರುವುದು ಹಾಗೂ ಕನ್ನಡದಲ್ಲಿ ಉತ್ತರಿಸುವ ವಿದ್ಯಾರ್ಥಿಗಳಿಗೆ ಕಡಿಮೆ ಶ್ರೇಯಾಂಕ ನೀಡುವ ಸೂಚನೆಗಳಿರುವುದು ಕನ್ನಡ ಭಾಷೆಯ ಮೇಲಿನ ನಕಾರಾತ್ಮಕ ಪರಿಣಾಮಕ್ಕೆ ಕಾರಣವಾಗಬಹುದು ಎಂದು ಪರಿಷತ್ ಆತಂಕ ವ್ಯಕ್ತಪಡಿಸಿದೆ.


ಭಾಷಾವಾರು ರಾಜ್ಯ ರಚನೆಯ ಆಶಯ, ಕರ್ನಾಟಕದ ಭಾಷೆ ಸಂಸ್ಕೃತಿಯ ಬೆಳವಣಿಗೆ ಹಾಗೂ ಮಕ್ಕಳ ಕಲಿಕೆಯ ಮೂಲಭೂತ ಹಂತದಲ್ಲಿ ಮಾತೃಭಾಷೆಯ ಮಹತ್ವವನ್ನು ಪರಿಗಣಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಮಾತೃಭಾಷೆಯ ಮೂಲಕ ಮಕ್ಕಳ ಆಲೋಚನಾ ಸಾಮರ್ಥ್ಯ ಮತ್ತು ಕಲಿಕೆಯ ಬೆಳವಣಿಗೆಗೆ ಹೆಚ್ಚಿನ ಅವಕಾಶ ದೊರೆಯುತ್ತದೆ ಎಂಬ ಅಂಶವನ್ನೂ ಉಲ್ಲೇಖಿಸಲಾಗಿದೆ.

# ಸ್ವಯಂ ಸ್ಫೂರ್ತಿಯ ಕಡಲು ನಮ್ಮ ಅಂಗೈಯಲ್ಲೇ ಇದೆ!

■ ಉದಯರಶ್ಮಿ ದಿನಪತ್ರಿಕೆ

**ಜಯ್ ನುಡಿ (ವ್ಯಕ್ತಿತ್ವ ವಿಕಸನ ಕುರಿತು ಲೇಖನ ಮಾಲಿಕೆ)**


ಏಕೋ ಏನೋ ಗೊತ್ತಿಲ್ಲ ಯಾವುದೇ ಕೆಲಸದಲ್ಲೂ ಆಸಕ್ತಿಯೇ ಇಲ್ಲ. ಹೇಗೋ ಮನಸ್ಸಿಗೆ ಒಪ್ಪಿಸಿ ಹುಮ್ಮಸ್ಸು ಮೂಡಿಸಿಕೊಂಡು ಯಾವ ಕೆಲಸವನ್ನು ಆರಂಭಿಸಿದರೂ ಅರ್ಧಂಬರ್ಧ ಮಾಡಿ ನಿಲ್ಲಿಸಿ ಬಿಡ್ತಿನಿ ಅನ್ನೋದು ಬಹುತೇಕ ಜನರ ಚಿಂತೆ. ಸಾಮಾನ್ಯವಾಗಿ ಬಹಳಷ್ಟು ಜನರನ್ನು ಮೇಲಿಂದ ಮೇಲೆ ಈ ತೊಂದರೆ ಕಾಡುತ್ತದೆ. ಮೇಲ್ನೋಟಕ್ಕೆ ಈ ಸಮಸ್ಯೆ ದೊಡ್ಡದೇನಲ್ಲ ಆದರೆ ಇದರ ಬೇರುಗಳನ್ನು ಬಲಗೊಳ್ಳಲು ಬಿಟ್ಟರೆ ಸಮಸ್ಯೆ ತಪ್ಪಿದ್ದಲ್ಲ. ಏನೆಲ್ಲ ಇದ್ದರೂ ಏನೂ ಸಾಧಿಸಲು ಸಾಧ್ಯವಾಗುವುದಿಲ್ಲ. ಅಂಥ ಪರಿಸ್ಥಿತಿ ನಿರ್ಮಾಣ ಮಾಡಿ ಬಿಡುತ್ತದೆ. 'ಒಂದು ದುರ್ಬಲ ಮನಸ್ಸು ಒಂದು ಸೂಕ್ಷ್ಮ ದರ್ಶಕದಂತೆ. ಅದು ಸಣ್ಣ ವಿಷಯಗಳನ್ನು ದೊಡ್ಡದಾಗಿಸುತ್ತದೆ. ಆದರೆ ದೊಡ್ಡದನ್ನು ಪಡೆಯಲಾರದು.' ಸ್ವಯಂ ಸ್ಫೂರ್ತಿ ಇರದಿದ್ದರೆ ಸಂಕಟ, ನೋವು, ಅವಮಾನ ಹಾಗೂ ಬೇಸರಗಳು ಬೆನ್ನು ಹತ್ತಿ ಜೀವ ತಿನ್ನುತ್ತವೆ. ಜೀವನವನ್ನು ನಿಸ್ಸಾರಗೊಳಿಸುತ್ತವೆ. ಇತರರ ಮುಂದೆ ತಲೆ ತಗ್ಗಿಸುವಂತೆ ಮಾಡುತ್ತವೆ. ಕೆಲವೊಮ್ಮೆ ಶಿಕ್ಷೆಯನ್ನು ಅನುಭವಿಸುವಂತೆ ಮಾಡುತ್ತವೆ. ಸ್ಫೂರ್ತಿ ಇಲ್ಲದ ಸ್ಥಿತಿಯಲ್ಲಿ ನಿರಂತರ ಎಲ್ಲದರಲ್ಲೂ ಅವಮಾನದ ಪೆಟ್ಟಿನ ಅನುಭವ ಎದೆಗೆ ಬಿಸಿ ನೀರಾಗಿಸಿ ಹುಯ್ಯುತ್ತದೆ. ಸದಾ ನಮ್ಮನ್ನು ನಾವು ಸ್ಫೂರ್ತಿಯುತವಾಗಿ ಇಟ್ಟುಕೊಳ್ಳುವುದು ಅತಿ ಮುಖ್ಯ. ಮನಸ್ಸಿದ್ದಲ್ಲಿ ಮಾರ್ಗ ತಾನಾಗಿ ಕಾಣುತ್ತದೆ. ಆದರೂ ಈ ನಿಟ್ಟಿನಲ್ಲಿ ನಮ್ಮ ದೃಷ್ಟಿಕೋನ ಬದಲಾಗದಿದ್ದರೆ 'ಆಯುಧವು ತನ್ನ ಯಜಮಾನನಿಗೂ ಶತ್ರುವೇ ಆಗಿದೆ' ಎಂಬಂತಾಗುತ್ತದೆ. ಕಲ್ಲಾಗಿರುವ ಮನಸ್ಸೆಂಬ ಆಯುಧವನ್ನು ಹೂವಿನಂತೆ ಮೆದುವಾಗಿಸಬೇಕು. ಹೊರಗಿನ ವಸ್ತುಗಳನ್ನು ಉಪಯೋಗಿಸಿ ಒಳ ಮನಸ್ಸನ್ನು ಹದಗೊಳಿಸಿ ಸ್ವಯಂ



ಸ್ಫೂರ್ತಿಗೊಳಿಸಿಕೊಳ್ಳುವುದು ಹೇಗೆundefined ಎಂಬುದನ್ನು ನೋಡೋಣ ಬನ್ನಿ.

**ಶಕ್ತಿ ತುಂಬುವ ವಸ್ತುಗಳನ್ನು ಬಳಸಿ**

ನಿಮಗೆ ಹಿತ ನೀಡುವ, ಇಷ್ಟವಾಗುವ, ನೀವು ಪ್ರೀತಿಸುವ, ವಸ್ತುಗಳು ನಿಮಗೆ ಶಕ್ತಿಯನ್ನು ತುಂಬುತ್ತವೆ. ಹೀಗಾಗಿ ಇವುಗಳಿಗೆ ನಿಮ್ಮ ಸುತ್ತಲೂ ಜಾಗ ನೀಡಿ. ಅವು ತಾಜಾ ಹೂಗಳು, ಸುಂದರ ಪೇಂಟಿಂಗ್ಸ್ ಇಲ್ಲವೇ ನುಡಿಮುತ್ತುಗಳಾಗಿರಬಹುದು. ಇವು ನಿಮ್ಮನ್ನು ಸ್ಫೂರ್ತಿಗೊಳಿಸಲು ತುದಿಗಾಲಲ್ಲೇ ನಿಂತಿರುತ್ತವೆ. ನೀರಸಗೊಂಡ



ಮನಸ್ಸು ತಕ್ಷಣಕ್ಕೆ ಉತ್ಸಾಹದಿಂದ ಎದ್ದು ನಿಲ್ಲುತ್ತದೆ. ಒಂದು ನವಿಲು ತನ್ನ ಗರಿಗಳನ್ನು ತೆರೆದಿಟ್ಟಾಗ ಮತ್ತು ನವಿಲಿನಂತೆ ನಡೆದಾಗ ಮಾತ್ರ ಸುಂದರವಾಗಿ ಆಕರ್ಷಕವಾಗಿ ಕಾಣಬಲ್ಲದು. ಅಂತೆಯೇ ನಿಮ್ಮ ಪ್ರಪಂಚದಲ್ಲಿ ನೀವು ಬಹಳಷ್ಟು ಬಯಸುವುದನ್ನೆಲ್ಲ ಸುತ್ತುವ–ರಿಸಿಕೊಂಡರೆ ಮನಾನಂದ ನೀಡುವದರ ಜೊತೆಗೆ ಮನಸ್ಸನ್ನು ಮಹತ್ತರ ಕಾರ್ಯಕ್ಕೆ ಸಿದ್ಧಗೊಳಿಸುತ್ತದೆ. ವಿಪರ್ಯಾಸದ ಸಂಗತಿಯೆಂದರೆ ಇದರತ್ತ ಅತೀ ಕಡಿಮೆ ಗಮನ ನೀಡುತ್ತಿದ್ದೇವೆ. ಇವುಗಳತ್ತ ಚಿತ್ತ ಹರಿಸಿದರೆ ಕಾಲದ ಗತಿಯಲ್ಲಿ ನಿಜಕ್ಕೂ ಶ್ರೇಷ್ಠ ಮಟ್ಟದಲ್ಲಿ ಸ್ಫೂರ್ತಿ ಮನೆ ಮಾಡುತ್ತದೆ. ಯಾವಾಗಲೂ ಸುಂದರ ವಸ್ತುಗಳು ನಿಮ್ಮ ಕಣ್ಣ ಮುಂದಿರಲಿ.

**ಹೆಚ್ಚಿನ ಸಮಯ ಓದಿ**

ಓದು ಬಹಳಷ್ಟನ್ನು ಕಲಿಸುತ್ತದೆ. ಹೊಸ ಹೊಸ ಆಲೋಚನೆಗಳು ಮನಸ್ಸನ್ನು ಪ್ರವೇಶಿಸುತ್ತವೆ. ಕಥೆ, ಕಾದಂಬರಿ, ಸದಭಿರುಚಿ ಪುಸ್ತಕಗಳ ಓದಿನಲ್ಲಿ ನಿರತರಾದರೆ ಸ್ಫೂರ್ತಿಯ ಮಟ್ಟ ಏರುತ್ತದೆ. ಸೃಜನಶೀಲತೆಯನ್ನೂ ಹೆಚ್ಚಿಸುತ್ತದೆ. ಓದಿನಲ್ಲಿಯ ಯಾವುದೇ ಒಂದು ವಿಚಾರ ನಿಮ್ಮಲ್ಲಿ ಸ್ಫೂರ್ತಿಯ ಕಿಡಿಯನ್ನು ಹೊತ್ತಿಸಬಹುದು. ಓದಿನ ಮೌಲ್ಯವನ್ನು ಅರಿತು ಅನುಸರಿಸಿದರೆ ಸ್ಫೂರ್ತಿಗೆ ಮಹಾನ್ ಪಾಠ ದೊರೆಯುವುದು. ಈಗಿನ ಗ್ಯಾಜೆಟ್ ದುನಿಯಾದಲ್ಲಿ ಪುಸ್ತಕ ಓದುವದಕ್ಕಿಂತ ಸಾಮಾಜಿಕ ಜಾಲತಾಣಗಳಲ್ಲಿ ಸಮಯ ವ್ಯರ್ಥ–ಗೊಳಿಸುವುದೇ ಹೆಚ್ಚಾಗುತ್ತಿದೆ. ಇದು ಒಂಟಿತನಕ್ಕೆ ಜಾರಿಸುತ್ತಿದೆ. 'ಎಲ್ಲ ಸಮಸ್ಯೆಗಳನ್ನು ತಪ್ಪಿಸಿ ಬಿಡುವ ಬದಲು ಎದುರಿಸಿದರೆ ಅವು ಚಿಕ್ಕದಾಗುತ್ತವೆ.' ಸ್ಫೂರ್ತಿಯಿದ್ದಲ್ಲಿ ನಮ್ಮೆಲ್ಲ ಕನಸುಗಳನ್ನು ಬೆನ್ನಟ್ಟಿ ಗೆಲ್ಲಬಹುದು. ಎಂಬುದು ಓದಿನಿಂದ ಬಹು ಬೇಗ ಅರ್ಥ–ವಾಗುತ್ತದೆ. ಒಬ್ಬ ಒಳ್ಳೆಯ ಓದುಗನು ಅವಕಾಶಗಳನ್ನು ಒಳ್ಳೆಯ ಭಾಗ್ಯವನ್ನಾಗಿ ಬದಲಾಯಿಸುತ್ತಾನೆ. ಯಾವಾಗಲಾದ್ರೂ ಓದಿದ್ರಾಯ್ತು ಎಂದು ಉದಾಸೀನ ಮಾಡಿದರೆ ಜೀವನ ಸ್ಫೂರ್ತಿಯನ್ನು ಸವಿಯಲಾಗುವುದಿಲ್ಲ.

**ಸಂಗೀತ ಆಲಿಸಿ**

'ನಾನು ಮೂರು ದಿನ ಸಂಗೀತ ಅಭ್ಯಾಸ ಮಾಡದಿದ್ದರೆ ನನ್ನ ಗಾಯನದಲ್ಲೇನೋ ಕೊರತೆಯಿದೆ ಎಂದು ನನ್ನ ಮನೆಯಾಕೆಗೆ ತಿಳಿಯುತ್ತದೆ. ಎರಡು ದಿನ ಅಭ್ಯಾಸ ಬಿಟ್ಟರೆ ತಟ್ಟನೆ ನನ್ನ ಅಭಿಮಾನಿಗಳು ಗುರುತಿಸಬಲ್ಲರು. ಇಲ್ಲ ಒಂದೇ ಒಂದು ದಿನ ಅಭ್ಯಾಸವನ್ನು ಬಿಟ್ಟರೂ ನನ್ನ ಆಲಾಪದಲ್ಲೇನೋ ಕೊರತೆಯಿದೆ ಎಂದು ಖುದ್ದು ನನಗೆ ಗೊತ್ತಾಗುತ್ತದೆ.'ಇದು ಸಂಗೀತದ ದೈತ್ಯ ಪ್ರತಿಭೆ ಎಂದೇ ಖ್ಯಾತರಾದ ಜಗಜೀತ್ ಸಿಂಗ್ ತನ್ನ ಅಭ್ಯಾಸದ ಕುರಿತು ಸ್ವಾರಸ್ಯಕರವಾಗಿ ಹೇಳಿದ ರೀತಿ. ಸಂಗೀತವು ಮನಸ್ಸನ್ನು, ಸುಂದರ ಭಾವನೆಗಳನ್ನು ಅರಳಿಸುತ್ತದೆ. ನಿಮಗೆ ಬೇಕಾದುದನ್ನು ಪಡೆಯಲು ಕಷ್ಟ ಪಟ್ಟು ಕೆಲಸ ಮಾಡಿದ ನಂತರ, ಅದನ್ನು ಸಂತೋಷದಿಂದ ಅನುಭವಿಸಲು ಸಮಯ ಪಡೆದುಕೊಳ್ಳಿ. ಗಜಿಬಿಜಿಯಾಗಿರುವ ಮನಸ್ಸಿಗೆ ವಿಶ್ರಾಂತಿ ನೀಡಿ ಮುದಗೊಳಿಸುತ್ತದೆ. ಸ್ಫೂರ್ತಿಯತ್ತ ವಾಲಿಸುತ್ತದೆ.

**ದಿನಚರಿ ಬದಲಿಸಿ**

'ಮಾಡಿದ್ದನ್ನೇ ಮಾಡುತ್ತ ವಿಭಿನ್ನವಾದ ಫಲಿತಾಂಶವನ್ನು ನಿರೀಕ್ಷಿಸುವುದು ಮೂರ್ಖತನ.' ಎಂದು ಹೇಳಿದ್ದಾನೆ ಜಗತ್ತಿನ ಮೇಧಾವಿ ವಿಜ್ಞಾನಿ ಅಲ್ಬರ್ಟ್ ಐನಸ್ಟೀನ್. ದಿನ ನಿತ್ಯ ಅದೇ ಕೆಲಸ ಅದೇ ಜನರು ಅದೇ ಗೊಣಗಾಟ ಜಂಜಾಟ. ಹೀಗಿದ್ದಾಗ್ಯೂ ದಿನಚರಿಯಲ್ಲಿ ಬದಲಾವಣೆಗೆ ಮನಸ್ಸು ಮಾಡುವುದು ಕಮ್ಮಿ. ಇಲ್ಲವೇ ಇಲ್ಲವೆನ್ನುವಷ್ಟು ಬದಲಾವಣೆಯನ್ನು ದೈನಂದಿನ ಕೆಲಸಗಳಲ್ಲಿ ತರುತ್ತೇವೆ. ನಿರಾಸಕ್ತಿಯಿಂದ ಅದನ್ನೇ ನಿಯಮಿತವಾಗಿ ಪಾಲಿಸುತ್ತೇವೆ. ಒಂದೇ ದಾರಿಯಲ್ಲೇ ಓಡಾಡುತ್ತೇವೆ. ಒಂದೇ ಹೊಟೆಲ್ಲಿನಲ್ಲಿ ಕಾಫೀ ಹೀರುತ್ತೇವೆ. ತಿನ್ನುವ ತಿಂಡಿ ತಿನಿಸು ಬದಲಿಸಲೂ ಹಿಂಜರಿಯುತ್ತೇವೆ. ಒಟ್ಟಿನಲ್ಲಿ ಏಕತಾನತೆಗೆ ಗಂಟು ಬಿದ್ದಿರುತ್ತೇವೆ. ಬದಲಾವಣೆ ಮನಸ್ಸಿಗೆ ಆಗಿ ಬರುವ ಮಾತಲ್ಲ.



ದಿನಚರಿ ಬದಲಿಸಲು ಮನಸ್ಸು ಅಷ್ಟು ಸುಲಭವಾಗಿ ಒಪ್ಪುವುದೂ ಇಲ್ಲ. ಹೊಸ ಸವಾಲುಗಳು ತಲೆ ತಿನ್ನುವ ಸಮಸ್ಯೆಗಳೆನಿಸದೇ, ಹೊಸ ಆಯಾಮದಲ್ಲಿ ಹೊಸ ಅನುಭವಗಳಾಗಬೇಕೆಂದರೆ ಸ್ಫೂರ್ತಿಯುತ ದಿನಚರಿಗೆ ಅಣಿಯಾಗಬೇಕು. 'ಸಮುದ್ರ ಶಾಂತವಾಗಿದ್ದಾಗ ಯಾರು ಬೇಕಿದ್ದರೂ ಚುಕ್ಕಾಣಿ ಹಿಡಿಯಬಹುದು.' ಮನಸ್ಸು ಶಾಂತವಾಗಿರುವಾಗ ಅದನ್ನು ಪುಟ್ಟ ಮಗುವನಂತೆ ಮುದ್ದಿಸಿ ಹೊಸ



ಬದಲಾವಣೆಗೆ ಒಪ್ಪಿಸಬೇಕು. 'ಅತ್ಯುತ್ತಮ ದಿನಚರಿ ನಮ್ಮದಾಗಿದ್ದರೆ ಸ್ವಯಂ ಸ್ಫೂರ್ತಿಯ ಕಡಲು ನಮ್ಮ ಅಂಗೈಯಲ್ಲೇ ಇದೆ.

**ದೇಶ ಸುತ್ತಿ**

ಶೈಕ್ಷಣಿಕ ಪ್ರವಾಸ ಇಲ್ಲವೇ ಸಣ್ಣ ಪುಟ್ಟ ಪ್ರಯಾಣಗಳು ನವನವೀನ ಅನುಭವಗಳನ್ನು ನೀಡುತ್ತವೆ. ವಿಚಾರದ ದಿಕ್ಕನ್ನು ಉತ್ತಮತೆಯತ್ತ ಹೊರಳಿಸುತ್ತವೆ. ದೂರದ ದೇಶಕ್ಕೆ ಪಯಣಿಸಬೇಕೆಂದೇನೂ ಇಲ್ಲ. ವಾಸವಿರುವ ನಗರವನ್ನೇ ಸುತ್ತಬಹುದು. ನೀವಿನ್ನೂ ನೋಡಿರದ ಪಾರ್ಕ್‌ನಲ್ಲಿ ಸುತ್ತಾಡಿ. ಹೊಸ ಮಠ ಮಂದಿರಗಳಿಗೆ ಕುಟುಂಬ, ಗೆಳೆಯರೊಂದಿಗೆ ಹೋಗಿ ಬನ್ನಿ. ವಿವಿಧ ಹಾದಿ ಬೀದಿಗಳಲ್ಲಿ ತಿರುಗುವುದು ವಿಶಿಷ್ಟ ಸ್ಫೂರ್ತಿಗೆ ದಾರಿಯಾಗುತ್ತದೆ. ಪಕ್ಕದ ಪ್ರವಾಸಿ ತಾಣಗಳಿಗೆ ಭೇಟಿ ನೀಡಿದರೂ ಲವಲವಿಕೆ ತುಂಬಿಕೊಳ್ಳುತ್ತದೆ. ಅಜ್ಞಾನದ ಅಂದಕಾರವನ್ನು ಕಡಿಮೆಗೊಳಿಸಿ ಜ್ಞಾನ ಕ್ಷಿತಿಜವನ್ನು ಅಗಲಿಸುತ್ತವೆ.

**ಎತ್ತರದ ಗುರಿಯಿರಲಿ**

ತಮಗೆಲ್ಲಗೊತ್ತಿರುವಂತೆ ಓಲಂಪಿಕ್ಸ್ ನಾಲ್ಕು ವರ್ಷಕ್ಕೊಮ್ಮೆ ಬರುವ ಕ್ರೀಡಾಕೂಟ. ಆದರೆ ಲಕ್ಷೋಪಲಕ್ಷ ಕ್ರೀಡಾ ಪಟುಗಳು ಓಲಂಪಿಕ್ಸ್‌ನಲ್ಲಿ ಬಂಗಾರದ ಪದಕ ಕೊರಳಿಗೇರಿಸಿ ಗೆಲುವಿನ ರುಚಿ ನೋಡಲು ದಿನನಿತ್ಯ ಬೆವರು ಹರಿಸುತ್ತಿರುತ್ತಾರೆ. ಉಸೇನ್ ಬೋಲ್ಟ್ ನೂರು ಮೀಟರ್‌ನ್ನು ಕ್ರಮಿಸಲು ಬೇಕಾಗಿರುವ ಅವಧಿ ಬರೀ ಒಂಭತ್ತುವರಿ ಸೆಂಕೆಡುಗಳಷ್ಟೇ! ಆದರೆ ನಿತ್ಯದ ಅಭ್ಯಾಸ? ಉಳಿದ ಓಟಗಾರನಿಗಿಂತ ನೂರು ಪಟ್ಟು ಹೆಚ್ಚು ಮಾಡಲೇಬೇಕು. ಅಷ್ಟರ ಮಟ್ಟದ ಸ್ವಯಂ ಸ್ಫೂರ್ತಿ ಇರದಿದ್ದರೆ ಉಸೇನ್ ಬೋಲ್ಟ್ ಜಾಗತಿಕ ಮಟ್ಟದಲ್ಲಿ ನಂಬರ್ ಒನ್ ಓಟಗಾರನಾಗಿ ಮಿಂಚಲು ಸಾಧ್ಯವಾಗುತ್ತಿರಲಿಲ್ಲ. ಸ್ವಯಂ ಸ್ಫೂರ್ತಿಯಿಲ್ಲದೇ ಗೆಲುವು ಕಂಡಿರುವ ವ್ಯಕ್ತಿ ಇರುವುದು ಅಸಾಧ್ಯ. 'ಸಣ್ಣ ಗುರಿಗಳನ್ನು ಹೊಂದುವುದು ಅಪರಾಧ/'ಎಂದಿದ್ದಾರೆ ಅಬ್ದುಲ್ ಕಲಾಂ. ಎತ್ತರದ ಆಗಸಕ್ಕೆ ಹಾರುವುದು ನಮ್ಮ ಗುರಿಯಾಗಿರಬೇಕು. ನಾವು ಅಲ್ಲಿಗೆ ತಲುಪದಿರಬಹುದು ಆದರೆ ನಾವಿರುವ ಮಟ್ಟದಲ್ಲೇ ಇರುವ ವಸ್ತುವಿಗೆ ಗುರಿಯಿಟ್ಟರೆ ಹಾರುವ ಮಟ್ಟಕ್ಕಿಂತ ಕಡಿಮೆ ಮಟ್ಟಕ್ಕೆ ನಮ್ಮ ಗುರಿಯ ಬಾಣ ಹಾರುತ್ತದೆ. ಎಲ್ಲಿಯವರೆಗೂ ನಾವು ಸ್ವಯಂ ಸ್ಫೂರ್ತಿಗೆ ಹಾತೊರೆಯುವುದಿಲ್ಲವೋ ಅಲ್ಲಿಯವರೆಗೆ ಗೆಲುವು ನಮಗೆ ದಕ್ಕುವುದಿಲ್ಲ. ನಾವು ಯಾವುದನ್ನಾದರೂ ಸಾಕಷ್ಟು ಪ್ರೀತಿಸಿದರೆ, ಅದು ತನ್ನ ರಹಸ್ಯಗಳನ್ನೆಲ್ಲ ಬಿಟ್ಟು ಕೊಡುತ್ತದೆ. ಆದ್ದರಿಂದ ಅಂಗೈಯಲ್ಲಿರುವ ಸ್ವಯಂ ಸ್ಫೂರ್ತಿಯನ್ನು ಪ್ರೀತ್ಸೋಣ ದೊಡ್ಡ ಗೆಲುವಿನ ನಗೆ ಬೀರೋಣ.


ಲೇಖನ
– ಜಯಶ್ರೀ.ಜೆ. ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 9449234142




# ತಾರಾಪುರದಲ್ಲಿ ನಾಗೇಶಗೆ ಹಾಲು ಎರೆದ ಮಹಿಳೆಯರು



■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಸಮೀಪದ ತಾರಾಪುರ ಗ್ರಾಮದಲ್ಲಿ ನಾಗರ ಪಂಚಮಿ ನಿಮಿತ್ಯವಾಗಿ. ಶ್ರಾವಣ ಮಾಸದ ಆಗಮನ ದೊಂದಿಗೆ ನಾಡ ನಾಡಿನಾದ್ಯಂತ ಹಬ್ಬಗಳ ಸುಗ್ಗಿ ಆರಂಭವಾಗಿದ್ದು ಈ ಮಾಸದ ಮೊದಲ ಪ್ರಮುಖ ಹಬ್ಬವಾದ ನಾಗರ ಪಂಚಮಿಗೆ ರಾಜ್ಯದಲ್ಲೆಡೆ ಸಂಭ್ರಮದಿಂದ ಆಚರಿಸುತ್ತಾರೆ. ಶ್ರಾವಣ ಶ ಶುಕ್ಲ ಪಕ್ಷದ ಪಂಚಮಿ ಎಂದು ಆಚರಿಸಲಾಗುವುದು ಈ ಪವಿತ್ರ ಪರ್ವವು ಮನಸ್ಸು ಮತ್ತು ಪ್ರಕೃತಿ ಹಾಗೂ ಜೀವ ರಾಶಿಗಳ ನಡುವಿನ ಆವಿನಾಭಾವ ಸಂಬಂಧವನ್ನು ಸಾರುತ್ತದೆ. ಸಂಪ್ರದಾಯ ಮತ್ತು ಧಾರ್ಮಿಕ ಹಿನ್ನೆಲೆ ಕೃಷಿ ಸಂಸ್ಕೃತಿಯಲ್ಲಿ ರೈತನ ಮಿತ್ರ ಎಂದೇ ಪರಿಗಣಿತವಾಗಿರುವ ನಾಗ ದೇವರಿಗೆ ಪೂಜೆ ಸಲ್ಲಿಸುವುದು ಈ ಹಬ್ಬ ದ ಮುಖ್ಯ ವಿಶೇಷ ಏನೆಂದರೆ ದೇವಸ್ಥಾನಗಳಲ್ಲಿನ ನಾಗರಕಲ್ಲು ಹಾಗೂ ಹುತ್ತಗಳಿಗೆ ಹಾಲು. ಆರಿಶಿನ. ಕುಂಕುಮ. ಹೂವು. ಮತ್ತು ಗೆಜ್ಜೆಯ ವಸ್ತ್ರವುನ್ನು ಅರ್ಪಿಸಿ ನಾಗದೋಷ ಶಮನ ಹಾಗೂ ಕುಟುಂಬದ ಕ್ಷೇಮ ಅಭಿವೃದ್ದಿಗಾಗಿ ಮಹಿಳೆಯರು ಭಕ್ತಿಯಿಂದ ಬೇಡಿಕೊಂಡರು

# ರೈತ ಕೇವಲ ಉತ್ಪಾದಕನಲ್ಲ ಉದ್ಯಮಿಯಾಗಬೇಕು : ಭಾವಿಕಟ್ಟಿ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ರೈತ ಕೇವಲ ಉತ್ಪಾದಕನಲ್ಲ, ಕೃಷಿಯ ಸಂಪೂರ್ಣ ಮೌಲ್ಯ ಸರಪಳಿಯಲ್ಲಿ ಪಾಲುದಾರ ಮತ್ತು ಉದ್ಯಮಿಯಾಗಬೇಕು ಎಂಬ ಪರಿಕಲ್ಪನೆಯೊಂದಿಗೆ ರೈತ ಉತ್ಪಾದಕ ಕಂಪನಿಯಾಗಿ 'ಆತ್ಮನಿರ್ಭರ ರೈತ' ನಿರ್ಮಾಣದತ್ತ ದಾಸೋಹಿ ದೃಢ ಹೆಜ್ಜೆಯನ್ನಿಡುತ್ತಿದೆ ಇಡುತ್ತಿದೆ ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಸುರೇಶ ಭಾವಿಕಟ್ಟಿ ಹೇಳಿದರು.

ಪಟ್ಟಣದ ಎ.ಪಿ.ಎಂ.ಸಿ ಆವರಣದಲ್ಲಿ ದಾಸೋಹಿ ಕುಕ್ಕುಟ ರೈತ ಉತ್ಪಾದಕ ಕಂಪನಿಯಿಂದ ರೈತರಿಗೆ ತೋಟಗಾರಿಕೆ ಮತ್ತು ಆರಣ್ಯ ಸಸಿಗಳನ್ನು ಪೂರೈಸುವ ಉದ್ದೇಶದಿಂದ ಸ್ಥಾಪಿಸಲಾದ ದಾಸೋಹಿ ಹಸಿರು ಅಭಿವೃದ್ಧಿ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೃಷಿಯ ಉತ್ಪಾದನೆ, ಮೌಲ್ಯವರ್ಧನೆ ಮತ್ತು ಮಾರುಕಟ್ಟೆಗೆ ಸಂಬಂದಿಸಿದಂತೆ ಪರಿಹಾರಾತ್ಮಕ ಅನುಸಂಧಾನಗಳಿಗೆ ಹೆಸರಾದ ದಾಸೋಹಿ ಕುಕ್ಕುಟ ರೈತ ಉತ್ಪಾದಕ ಕಂಪನಿಯ ಪ್ರಯತ್ನಗಳು ಕರ್ನಾಟಕ ರೈತ ಉತ್ಪಾದಕ ಸಂಸ್ಥೆಗಳ ಬೆಳವಣಿಗೆಗೆ ಹೊಸ ಮಾದರಿಯಾಗಿವೆ ಎಂದರು.

ಮುಖ್ಯ ಅತಿಥಿಯಾಗಿದ್ದ ಪಶು ಸಂಗೋಪನೆ ಮತ್ತು ವೈಧ್ಯಕೀಯ ಇಲಾಖೆಯ ಮುಖ್ಯ ಪಶು ವೈಧ್ಯಾಧಿಕಾರಿ ಡಾ. ಸುರೇಶ ಮಾತನಾಡಿ ರೈತ ಉತ್ಪಾದಕ ಕಂಪನಿಗಳು ಕೇವಲ ರೈತರ ಉತ್ಪನ್ನಗಳನ್ನು ಮಾರಾಟ ಮಾಡುವ ಸಂಸ್ಥೆಗಳಾಗದೆ, ರೈತರಿಗೆ ಅಗತ್ಯವಿರುವ ಕೃಷಿ ಒಳಸುಳಿಗಳ ಉತ್ಪಾದನೆ ಮತ್ತು ವಿತರಣೆ, ತಾಂತ್ರಿಕ ಸೇವೆಗಳು ಹಾಗೂ ಕೃಷಿ ಆಧರಿತ ಉದ್ಯಮಗಳನ್ನು ನಿರ್ವಹಿಸುವ ಸಂಸ್ಥೆಗಳಾಗಬೇಕು ಎಂಬ ಪರಿಕಲ್ಪನೆಗೆ ಒತ್ತು ನೀಡಿದ ದಾಸೋಹಿ ಕಂಪನಿಯಿಂದ ಈ ಭಾಗದಲ್ಲಿ ಸಮೃದ್ದ ಕೃಷಿ ಪರಿಸರ ವ್ಯವಸ್ಥೆಯೊಂದು ನಿರ್ಮಾಣವಾಗುತ್ತಿದೆ ಎಂದರು.

ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ರಾಘವೇಂದ್ರ ದೇಶಪಾಂಡೆ ಮಾತನಾಡಿ, ರೈತರ ಆರ್ಥಿಕ ಅಭಿವೃದ್ಧಿಯಲ್ಲಿ ತೋಟಗಾರಿಕೆಯ ಮಹತ್ವವನ್ನು ಅರಿತು ಈ ಭಾಗದ ರೈತರಿಗೆ ಉತ್ತಮ ತಳಿ, ಗುಣಮಟ್ಟದ ಸಸಿ, ಪೂರೈಕೆ ಸರಪಳಿ, ವೈಜ್ಞಾನಿಕ ಮಾರ್ಗದರ್ಶನ ಮತ್ತು ಮಾರುಕಟ್ಟೆ ಬೆಂಬಲಗಳನ್ನು ಒಂದೇ ಸೂರಿನಡಿ ತಂದು ರೈತರಿಗೆ ಸುಸ್ಥಿರ ತೋಟಗಾರಿಕೆ ಮಾದರಿ ಪರಿಚಯಿಸುವ ಉದ್ದೇಶದಿಂದ ತೆರೆದುಕೊಂಡ ದಾಸೋಹಿ ಹಸಿರು ಅಭಿವೃದ್ಧಿ ಕೇಂದ್ರವು ಈ ಭಾಗದ ತೋಟಗಾರಿಕೆ ಹಸಿವನ್ನು ತಣಿಸಲೆಂದು ಹಾರೈಸಿದರು.

ಅಧ್ಯಕ್ಷತೆ ವಹಿಸಿದ್ದ ದಾಸೋಹಿ ರೈತ ಉತ್ಪಾದಕ ಸಮೂಹ ಸಂಸ್ಥೆಗಳ ಅಧ್ಯಕ್ಷ, ಚಿಂತಕ ಅರವಿಂದ ಕೊಪ್ಪ ಮಾತನಾಡಿದರು.

ರಮೇಶ ಶರಣರು, ಶರಣಯ್ಯ ಹಿರೇಮಠ, ದಾಸೋಹಿ ಕಂಪನಿ ಉಪಾಧ್ಯಕ್ಷ ಜಿ.ಎಂ ಯಡವಣ್ಣವರ, ಕೃಷಿ ಚಿಂತಕ ಡಾ. ರಾಜಶೇಖರ ಹತ್ತರಸಂಗ ಮಾತನಾಡಿದರು. ಆರ್.ಬಿ ಸಜ್ಜನ, ಎನ್.ರವಿಕುಮಾರ, ಸಿ.ಆರ್ ಬಿರಾದಾರ, ಬಿ.ಎಂ ಪಾಟೀಲ, ನಿರ್ದೇಶಕರಾದ ಸೋಮನಗೌಡ ಬಿರಾದಾರ, ಶ್ರೀಶೈಲ ಮೇಟಿ(ಚೊಂಡಿ), ಬಸವರಾಜ ಕುಂಟೋಜಿ, ಪರಸಪ್ಪ ಮೇಟಿ, ಡಾ. ವಿಜಯ ಹುಬ್ಬಳ್ಳಿ, ಬಸವರಾಜ ಸಿದ್ದಾಪೂರ, ಗುರಯ್ಯ ಮುದ್ದನೂರಮಠ, ಅಮರೇಶ ಹಟ್ಟಿ, ಮಲ್ಲು ಗುರಡ್ಡಿ, ಲೇಶಪ್ಪ ಪ್ಯಾಟಿಗೌಡರ, ಪ್ರಗತಿಪರ ರೈತ ಜಿ.ಎನ್ ಬಿರಾದಾರ(ಬಿಂಜಲಭಾವಿ) ಮತ್ತೀತರರು ಇದ್ದರು. ಪ್ರಭುದೇವಯ್ಯ ಹಿರೇಮಠ ಸ್ವಾಗತಿಸಿ ಪ್ರಸ್ತಾವಿಕ ಮಾತುಗಳನ್ನಾಡಿದರು. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನಾಗರತ್ನಾ ಅರಮನಿ ಮತ್ತು ಕಾರ್ಯನಿರ್ವಾಹಕ ಅಧಿಕಾರಿ ರಶ್ಮಿ ಗೋನಾಳ ಕಾರ್ಯಕ್ರಮ ನಿರೂಪಿಸಿದರು. ಶರಣು ಹೆಬ್ಬಾಳ ವಂದಿಸಿದರು.

# ಕ್ರಿಯಾಶೀಲ ಸಮೀತಿಯಿಂದ ಶಾಲೆಯ ಅಭಿವೃದ್ಧಿ : ಶಾಸಕ ಸವದಿ



■ ಉದಯರಶ್ಮಿ ದಿನಪತ್ರಿಕೆ

ಚಿಮ್ಮಡ: ಶಾಲೆಗೆ ಅಗತ್ಯ ಮೂಲಭೂತ ಸೌಲಭ್ಯಗಳು, ಅನುದಾನ ಬಳಕೆ, ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯ ವೃದ್ದಿಸಲು ಶಾಲಾ ಅಭಿವೃದ್ದಿ ಸಮೀತಿಯ ಪಾತ್ರವೂ ಮಹತ್ವದ್ದಾಗಿದ್ದು. ಕ್ರಿಯಾಶೀಲ ಸಮೀತಿಯಿಂದ ಅಭಿವೃದ್ಧಿ ಸಾಧ್ಯವೆಂದು ತೇರದಾಳ ಶಾಸಕ ಸಿದ್ದು ಸವದಿ ಹೇಳಿದರು.

ಗ್ರಾಮದ ಸರಕಾರಿ ಹೆಣ್ಣು ಮಕ್ಕಳ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಹಮ್ಮಿಕೊಳ್ಳಲಾಗಿದ್ದ ಶಾಲಾ ಅಭಿವೃದ್ದಿ ಸಮೀತಿಯ ಅಧ್ಯಕ್ಷ, ಉಪಾಧ್ಯಕ್ಷ, ಸರ್ವಸದಸ್ಯರ ಸತ್ಕಾರ ನೆರವೇರಿಸಿ ಮಾತನಾಡಿದ ಅವರು, ಶಾಲೆಯ ಅಗತ್ಯಗಳಿಗೆ ಗ್ರಾಮದ ಪ್ರತಿಯೊಬ್ಬರು ಸ್ಪಂದನೆ ನಿರಂತರವಾಗಿರಲಿದ್ದು ಪಧಾದಿಕಾರಿಗಳು ನಿರಂತರ ಸಂಪರ್ಕದಿಂದ ಶಾಲೆಗೆ ಯಾವುದೇ ಸಮಸ್ಯೆ ಬಾರದಂತೆ ಸ್ಪಂದಿಸಬೇಕೆಂದು ಸಲಹೆ ನೀಡಿದರು.

ಗ್ರಾ.ಪಂ ಮಾಜಿ ಅಧ್ಯಕ್ಷ ಆನಂದ ಕವಟಿ, ತಾ.ಪಂ. ಮಾಜಿ ಉಪಾಧ್ಯಕ್ಷ ಪ್ರಭು ಮುಧೋಳ, ಮಾಜಿ ಉಪಾಧ್ಯಕ್ಷ ಪ್ರಕಾಶ ಪಾಟೀಲ, ಮನೋಜ ಹಟ್ಟಿ ಅವ್ವನಪ್ಪ ಮುಗಳಖೋಡ, ಪಿರಸಾಬ ನದಾಫ, ನಾಗಪ್ಪ ಆಲಕನೂರ, ಘಟಿಗೆಪ್ಪ ಜಾಂಗನೂರ, ಶಿವಪ್ಪ ಉರಭಿನವರ, ತುಕಾರಾಮ ದೊಡಮನಿ, ಸಿಆರ್‌ಪಿ ದ್ರಾಕ್ಷಾಯಿಣಿ ಮಂಡಿ, ಮುಖ್ಯಗುರು ಎಸ್.ಎ ಬಿರಾದಾರ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಶಾಲಾ ಅಭಿವೃದ್ದಿ ಸಮೀತಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ವಿಜಯ ಯಂಕಂಚಿ, ಉಪಾಧ್ಯಕ್ಷೆ ಲಕ್ಕವ್ವ ತಿಗಣಿಬಿದರಿ ಹಾಗೂ ಸರ್ವ ಸದಸ್ಯರನ್ನು ಶಾಸಕ ಸಿದ್ದು ಸವದಿ ಸತ್ಕರಿಸಿ ಗೌರವಿಸಿದರು.

# ಪತ್ರಿಕೋದ್ಯಮ ಪ್ರಜಾಪ್ರಭುತ್ವದ ಕಾವಲುಗಾರ : ಕೊಣ್ಣೂರ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಪತ್ರಿಕೋದ್ಯಮವು ಕೇವಲ ಸುದ್ದಿ ಬರೆಯುವ ಅಥವಾ ಪ್ರಕಟಿಸುವ ವೃತ್ತಿಯಲ್ಲ. ಅದು ಪ್ರಜಾಪ್ರಭುತ್ವದ ಕಾವಲುಗಾರ ಎಂದು ಹಿರಿಯ ಪತ್ರಕರ್ತ ಪರಶುರಾಮ ಕೊಣ್ಣೂರ ಹೇಳಿದರು.

ಸ್ವಾತಂತ್ರೋತ್ಸವದ ಅಂಗವಾಗಿ ತಾಲೂಕು ಆಡಳಿತದಿಂದ ಆಡಳಿತ ಸೌಧದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಗೌರವ ಸನ್ಮಾನ ಸ್ವೀಕರಿಸಿ ಬಳಿಕ ಪತ್ರಿಕೆಯೊಂದಿಗೆ ಅವರು ಮಾತನಾಡಿದರು.

ಸಮಾಜದ ಆಗು ಹೋಗುಗಳನ್ನು ಜನರ ಮುಂದಿಡುವ, ಜನರ ಸಮಸ್ಯೆಗಳಿಗೆ ಧ್ವನಿಯಾಗುವ ಹಾಗೂ ಆಡಳಿತ ವ್ಯವಸ್ಥೆಯ ಕಾರ್ಯವೈಖರಿಯನ್ನು ಪ್ರಶ್ನಿಸುವ ಮಹತ್ವದ ಜವಾಬ್ದಾರಿ ಪತ್ರಕರ್ತರದ್ದಾಗಿದೆ. ಅದಕ್ಕಾಗಿಯೇ ಪತ್ರಿಕೋದ್ಯಮವನ್ನು ಪ್ರಜಾಪ್ರಭುತ್ವದ ನಾಲ್ಕನೇ ಅಂಗ ಎಂದು ಕರೆಯಲಾಗುತ್ತದೆ. ಆದರೆ ಸಧ್ಯದ ದಿನಮಾನಗಳಲ್ಲಿ ಅಕ್ಷರಗಳ ಜ್ಞಾನವಿಲ್ಲದವರು, ನಿಗಧಿತ ವಿದ್ಯಾರ್ಹತೆ ಇಲ್ಲದವರು ಪತ್ರಕರ್ತರ ಸೋಗಿನಲ್ಲಿ ತಿರುಗಾಡುತ್ತ, ಅಧಿಕಾರಿಗಳನ್ನು ಹೆದರಿಸುತ್ತ, ಏಕ ವಚನದಲ್ಲಿ ಟೀಕಿಸುತ್ತ ಹಣ ಪೀಕುವ ಧಂದೆ ಮಾಡಿಕೊಂಡಿದ್ದಾರೆ. ಇಂತವರಿಂದ ನಿಜವಾದ ಪತ್ರಕರ್ತರು ಮುಜುಗರ ಪಡುವಂತಾಗಿದೆ. ಇದಕ್ಕೆ ಸರ್ಕಾರ ದಿಟ್ಟ ಕ್ರಮಗಳನ್ನು ಕೈಗೊಳ್ಳುವ ಅವಶ್ಯಕತೆ ಇದೆ ಎಂದರು.

ಇದೇ ವೇಳೆ ಕರಾಟೆ ಮತ್ತು ಸ್ಕೆಟಿಂಗ್ ನಲ್ಲಿ ರಾಜ್ಯಮಟ್ಟದಲ್ಲಿ ಸಾಧನೆ ಮಾಡಿದ ಶಕುಂತಲಾ ಶಾರದಳ್ಳಿ ಮತ್ತು ವಿಕ್ರಾಂತ ಶಾರದಳ್ಳಿ ಅವರನ್ನೂ ಸಹ ಸನ್ಮಾನಿಸಿ ಗೌರವಿಸಲಾಯಿತು. ಈ ವೇಳೆ ಶಾಸಕ ಸಿ.ಎಸ್.ನಾಡಗೌಡರು, ಪ್ರಭಾರ ತಹಸೀಲ್ದಾರ ಎಂ.ಎಸ್.ಅರಕೇರಿ, ಸಿಪಿಐ ಮೊಮ್ಮದ ಫಸಿಯುದ್ದೀನ್, ಪಿಎಸ್‌ಐ ಸಂಜಯ ತಿಪರೆಡ್ಡಿ, ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ ಮತ್ತೀತರರು ಇದ್ದರು.

# ತಾವರಖೇಡ ಮುಗಳಖೋಡ ನೂತನ ಬಸ್ ಪ್ರಾರಂಭ




■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ತಾಲೂಕಿನ ಭೀಮ ನದಿಯ ದಂಡಿಯಲ್ಲಿರುವ ಪುಣ್ಯ ಕ್ಷೇತ್ರ ಶ್ರೀ ಪೀರ್ ಗೈಬ ಸಾಹೇಬ ನೆಲೆಸಿರುವ ಪುಣ್ಯ ಕ್ಷೇತ್ರ ತಾವರಖೇಡ ಗ್ರಾಮದಿಂದ ಮುಗಳಖೋಡಕ್ಕೆ ನೂತನ ಬಸ್ಸಿಗೆ ವೇದಮೂರ್ತಿ ಮಾಂತಯ್ಯ ಹಿರೇಮಠ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು.

ಭಕ್ತರಿಗೆ ಬಸ್ಸಿನ ಸೌಕರ್ಯ ಕಲ್ಪಿಸಿಕೊಟ್ಟ ಸಿಂದಗಿ ಮತ ಕ್ಷೇತ್ರದ ಶಾಸಕರಾದ ಆಶೋಕ ಮನಗೂಳಿ ಇವರಿಗೆ ತಾವರಖೇಡ ಕಡಣಿ ಗ್ರಾಮಸ್ಥರು ಅಭಿನಂದಿಸಿದರು.

ಸಿದ್ದು ಆಫಜಲಪುರ, ಶಿವಾನಂದ ಬಗಲಿ, ಶರಣಪ್ಪ ನಾಟಿಕಾರ್, ಸುರೇಶ್ ಪೂಜಾರಿ, ಮಲ್ಲು ಬೋಗೂಂಡಿ, ಅಣ್ಣಾರಾಯ ಬಗಲಿ, ರಾಜಶೇಖರ ಪಾಟೀಲ, ರಮೇಶ್ ಅಫಜಲಪುರ, ಈರಣ್ಣ ಬಿರಾದಾರ, ಹನುಮಂತ್ರಾರಾಯ ಬಗಲಿ, ಯಲ್ಲಾಲಿಂಗ ಬಿರಾದಾರ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು

# ತಾಲೂಕು ಆಡಳಿತದ ಭ್ರಷ್ಟಾಚಾರ & ವಿಳಂಬ ನೀತಿ ಖಂಡಿಸಿ ಪ್ರತಿಭಟನೆ

## ಎಚ್ ಡಿ ಕೋಟೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯಿಂದ ಪ್ರತಿಭಟನಾ ಮೆರವಣಿಗೆ

■ ಉದಯರಶ್ಮಿ ದಿನಪತ್ರಿಕೆ



ಎಚ್ ಡಿ ಕೋಟೆ: ಅವಳಿ ತಾಲೂಕಿನ ರೈತರು ಮಳೆ ಇಲ್ಲದೇ ಕಂಗಾಲಾಗಿದ್ದಾರೆ. ಹೀಗಾಗಿ ತಾಲ್ಲೂಕನ್ನು ಬರಪೀಡಿತ ಎಂದು ಘೋಷಿಸಿ ಪ್ರತಿ ಎಕರೆಗೆ 50 ಸಾವಿರ ರೂಪಾಯಿ ಪರಿಹಾರವನ್ನು ಒಂದು ತಿಂಗಳಲ್ಲೇ ವಿತರಿಸಬೇಕು. ಕಬಿನಿ ಜಲಾಶಯದಿಂದ ತಾರಕ ಜಲಾಶಯಕ್ಕೆ 2 ಟಿಎಂಸಿ ನೀರು ಲಿಫ್ಟ್ ಮಾಡಬೇಕೆಂದು ರೈತ ಮುಂಖಡ ಚಾ. ನಂಜುಂಡಮೂರ್ತಿ ಒತ್ತಾಯ ಮಾಡಿದರು.

ತಾಲ್ಲೂಕು ಆಡಳಿತದ ಭ್ರಷ್ಟಾಚಾರ ಹಾಗೂ ವಿಳಂಭನೀತಿ ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘ ನಡೆಸಿದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ವೈನಾಡಲ್ಲಿ ವರುಣ ತೋರಿದೆ ಕೃಪದಿಂದ ಕಬಿನಿ ಜಲಾಶಯಕ್ಕೆ ಅಪಾರ ಪ್ರಮಾಣದಲ್ಲಿ ನೀರು ಹರಿದುಬರುತ್ತಿದ್ದು, ಆ ನೀರನ್ನು ತಮಿಳುನಾಡಿಗೆ ಹರಿಯಬಿಡಲಾಗುತ್ತಿದೆ. ಮೊದಲು ತಾರಕ ಜಲಾಶಯ ಹಾಗೂ ಹೆಬ್ಬಾಳ ಜಲಾಶಯಕ್ಕೆ ನೀರು ತುಂಬಿಸಿ, ನಾಲೆಗಳಲ್ಲಿ ನೀರುಹರಿಸಿ ಕೆರೆಕಟ್ಟೆಗಳನ್ನು ಭರ್ತಿ ಮಾಡಬೇಕು. ಈ ಮೂಲಕ ಬತ್ತಿಹೋಗಿರುವ ಬೋರ್ ವೆಲ್ ಗಳಿಗೆ ಮರುಜೀವ ನೀಡಿ, ರೈತನ ಬದುಕನ್ನ ಹಸನಮಾಡಬೇಕು. ಕಾಡುಪ್ರಾಣಿಗಳಿಂದ ಜೀವಕ್ಕೆ ಹಾನಿಯಾದರೆ, ಸುಪ್ರೀಂಕೋರ್ಟ್ ನಿರ್ದೇಶನಂತೆ ಸೂಕ್ತ ಪರಿಹಾರ ಹಾಗೂ ಅವರ ಕುಟುಂಬಕ್ಕೆ ಸರ್ಕಾರಿ ನೌಕರಿ ನೀಡಬೇಕು ಎಂದು ಆಗ್ರಹಿಸಿದರು.

ರೈತ ಮುಖಂಡ ಲೋಕೇಶ್ ರಾಜ್ ಅರಸು ಮಾತನಾಡಿ, ರೈತರ ಬದುಕು ಇಂದು ಅತಂತ್ರವಾಗಿದೆ. ದಿನೇ ದಿನೇ ರೈತರ ಸಮಸ್ಯೆಗಳು ಹೆಚ್ಚಾಗುತ್ತಿವೆ, ಸ್ವಾತಂತ್ರ್ಯ ಬರುವ ಮೊದಲು ಈ ದೇಶದಲ್ಲಿ ಬರಗಾಲ ಇತ್ತು, ಆ ಪರಿಸ್ಥಿತಿಯನ್ನು ಎದುರಿಸಲು ವಿದೇಶದಿಂದ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಿಕೊಳ್ಳಲಾಗಿತ್ತು, ಆದರೆ ಇವತ್ತು ದೇಶದ ನೂರ ನಲ್ವತ್ತು ಕೋಟಿ ಜನಕ್ಕೂ ಯಾವುದೇ ಆಹಾರ ಕೊರತೆ ಆಗದಂತೆ ರೈತಾಪಿ ವರ್ಗವು ದುಡಿಯುತ್ತಿದೆ.

ರಾಜ್ಯಕ್ಕೆ ಬರಗಾಲ ಬಂದಿದೆ ಈ ಬರಗಾಲವನ್ನ ಎದುರಿಸಲು ಸರ್ಕಾರ ಯಾವುದೇ ಕಾರ್ಯಕ್ರಮ ಕೈಗೊಂಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಮಹದೇವನಾಯ್ಕ, ನಂದೀಶ್, ಉಮೇಶ್, ಪ್ರಸಾದ್, ಚಾ.ನಂಜುಂಡಮೂರ್ತಿ, ಲೋಕೇಶ್ ರಾಜೇ ಅರಸ್, ಗೌಡೆಗೌಡ, ವಿಜಯೇಂದ್ರ, ಕೆ.ಸಿ.ಪರಮೇಶ್, ಶಿರಮಳ್ಳಿ ಸಿದ್ದಪ್ಪ, ಸರಗೂರು ನಟರಾಜು, ಮನುಸೋಮಯ್ಯ, ಹೆಜ್ಜಿಗೆ ಪ್ರಕಾಶ್, ಟಿ.ರಾಜು, ಮಹದೇವನಾಯ್ಕ, ನಂದೀಶ್ ಹಿರೇಹಳ್ಳಿ, ಬಿ.ಟಿ.ಉಮೇಶ, ಪಿ.ನಾಗರಾಜು, ಪ್ರಸಾದ್, ಚೌಡನಾಯ್ಕ, ಮಹೇಂದ್ರ, ಸಿ.ವೆಂಕಟಸ್ವಾಮಿ, ರವಿ, ಮುನಿಯಾಂಡಿ, ಬಸವರಾಜು, ಮಂಚನಾಯ್ಕ, ಚೌಡಮ್ಮ, ಚನ್ನನಾಯಕ, ಮಹಾಲಿಂಗು, ರತ್ನಮ್ಮ, ಬಿ.ಕೆ.ಮಹೇಶ್. ಬಸವರಾಜಪ್ಪಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು.

ತಾಲೂಕು ಆಡಳಿತ ವ್ಯವಸ್ಥೆಯಲ್ಲಿ ಭ್ರಷ್ಟಾಚಾರ ತುಂಬಿ ತುಳುಕಾಡುತ್ತಿದೆ. ಪ್ರತಿಯೊಂದಕ್ಕೂ ಅಧಿಕಾರಿಗಳು ಲಂಚ ಪಡೆಯುತ್ತಿದ್ದಾರೆ. ಉದ್ದೇಶಪೂರ್ವಕವಾಗಿಯೇ ವಿಳಂಬ ನೀತಿ ಅನುಸರಿಸುತ್ತಿದ್ದಾರೆ ಎಂದು ಆರೋಪಿಸಿ ಕರ್ನಾಟಕ ಭೂ ಹಕ್ಕುದಾರರ ವೇದಿಕೆ ಸಹಯೋಗದಲ್ಲಿ

ಎಚ್ ಡಿ ಕೋಟೆ ತಾಲೋಕು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸಂಘದ ಸದಸ್ಯರು, ಪ್ರತಿಭಟನಾ ಮೆರವಣಿಗೆ ನಡೆಸಿದರು. ಪಟ್ಟಣದ ಗದ್ದಿಗೆ ಸರ್ಕಲ್ ನಿಂದ ಮಿನಿ ವಿಧಾನ ಸೌಧದ ಆವರಣದವರೆಗೂ ಎತ್ತಿನಗಾಡಿ, ಟ್ರ್ಯಾಕ್ಟರ್ ಹಾಗು ಬೈಕ್ ರ್ಯಾಲಿ ನಡೆಸಿ, ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

# ಜಾನಪದ ಕಲೆ, ಸಂಸ್ಕೃತಿ ಉಳಿಸಿ ಬೆಳೆಸೋಣ: ಮುಲ್ಲಾ

## ಆ.22 ರಂದು ಕರ್ನಾಟಕ ಜಾನಪದ ಪರಿಷತ್ ಪದಾಧಿಕಾರಿಗಳ ಪದಗ್ರಹಣ ಸಮಾರಂಭ




■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಕರ್ನಾಟಕ ಜಾನಪದ ಪರಿಷತ್ತಿನ ತಾಲೂಕು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿ ನೂತನ ಜವಾಬ್ದಾರಿ ನೀಡಿರುವ ಪರಿಷತ್ತಿನ ರಾಜ್ಯಾಧ್ಯಕ್ಷ ಹಿ.ಚಿ.ಬೋರಲಿಂಗಯ್ಯ ಹಾಗೂ ಜಿಲ್ಲಾಧ್ಯಕ್ಷ ಬಿ.ಎನ್.ಪಾಟೀಲ ಅವರ ವಿಶ್ವಾಸವನ್ನು ಎಂದಿಗೂ ಕುಂದಲು ಬಿಡುವುದಿಲ್ಲ ಎಂದು ಪರಿಷತ್ತಿನ ನೂತನ ತಾಲೂಕು ಅಧ್ಯಕ್ಷ ಎ.ಆರ್.ಮುಲ್ಲಾ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲೂಕು ಘಟಕದ ಪದಾಧಿಕಾರಿಗಳನ್ನು ಆಯ್ಕೆ ಮಾಡಿ ಅವರು ಮಾತನಾಡಿದರು.

ಜಾನಪದ ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ನಮ್ಮ ನಾಡಿನ ಸಾಂಪ್ರದಾಯಿಕ ಪರಂಪರೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಸರ್ಕಾರದ ಅಧೀನದಲ್ಲಿರುವ ಪರಿಷತ್ತಿನಿಂದ ದೊರೆತಿರುವದು ನನ್ನ ಪುಣ್ಯ. ಈ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸುವೆ ಎಂದರು.

ಪ್ರ.ಕಾರ್ಯದರ್ಶಿಗಳಾಗಿ ಆಯ್ಕೆಯಾದ ಎಲ್. ಎಂ.ಚಲವಾದಿ ಅವರು ಮಾತನಾಡಿ, ಜಾನಪದ ಕಲೆ ಕೇವಲ ಮನರಂಜನೆಯ ಸಾಧನವಲ್ಲ. ಅದು ನಮ್ಮ ಹಿರಿಯರು ಉಳಿಸಿಕೊಂಡು ಬಂದಿರುವ ನಾಡಿನ ಸಂಸ್ಕೃತಿ, ಜೀವನ ಪದ್ಧತಿ, ಆಚಾರ–ವಿಚಾರ ಹಾಗೂ ಪರಂಪರೆಯ ಪ್ರತಿಬಿಂಬವಾಗಿದೆ. ಇಂತಹ ಅಮೂಲ್ಯ ಪರಂಪರೆಯನ್ನು ಇಂದಿನ ಯುವ ಪೀಳಿಗೆಗೆ ಪರಿಚಯಿಸುವ ಕೆಲಸವನ್ನು ಪರಿಷತ್ತಿನ ಮೂಲಕ ಮಾಡುತ್ತೇವೆ ಎಂದರು. ಜಂಟಿ ಕಾರ್ಯದರ್ಶಿಯಾಗಿ ಆಯ್ಕೆಯಾದ ಎಸ್.ಕೆ.ಘಾಟಿ ಅವರು ಮಾತನಾಡಿದರು.

ಈ ವೇಳೆ ಸರಸ್ವತಿ ಪೀರಾಪೂರ, ಎಸ್.ವಾಯ್. ವಗ್ಗರ, ರಮೇಶ ಇಂಗಳಗಿ, ಎಂ.ವ್ಹಿ.ಬಿಳೇಭಾವಿ, ಎಸ್. ಆರ್.ಪಾಟೀಲ, ಎಂ.ಪಿ.ವಾಳದವರ ಇದ್ದರು.

### ಆ.22 ರಂದು ಪದಗ್ರಹಣ

ತಾಲೂಕು ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಅ22 ರಂದು ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಬೆಂಗಳೂರು ಬೇಕರಿ ಫಕ್ಷನ್ ಹಾಲ್ ನಲ್ಲಿ ಆಯೋಜಿಸಲಾಗಿದೆ.

**ನೂತನ ಪದಾಧಿಕಾರಿಗಳು**

ಅಶೋಕ ತಡಸದ (ಗೌರವಾಧ್ಯಕ್ಷರು), ಎ.ಆರ್.ಮುಲ್ಲಾ (ಅಧ್ಯಕ್ಷರು), ಪ್ರಕಾಶ ನರಗುಂದ (ಉಪಾಧ್ಯಕ್ಷರು), ಎಸ್.ಬಿ.ಕಂಚಾಣಿ (ಕಾರ್ಯಾಧ್ಯಕ್ಷರು), ಎಸ್.ಕೆ.ಘಾಟಿ (ಜಂಟಿ ಕಾರ್ಯದರ್ಶಿಗಳು), ಎಲ್.ಎಂ.ಚಲವಾದಿ (ಪ್ರಧಾನ ಕಾರ್ಯದರ್ಶಿಗಳು), ಎಸ್.ವಾಯ್.ವಗ್ಗರ (ಖಜಾಂಚಿ), ಎಂ.ಎನ್.ಮಾಗಿ (ಸಂಘಟನಾ ಕಾರ್ಯದರ್ಶಿ), ಸರಸ್ವತಿ ಪೀರಾಪೂರ (ಸಂಚಾಲಕಿ), ಚೇತನ ಶಿವಶಿಂಪಿ (ಕಾನೂನು ಸಲಹೆಗಾರರು), ಹುಸೇನ ಮುಲ್ಲಾ (ಪತ್ರಿಕಾ ಸಲಹೆಗಾರರು), ಸದಸ್ಯರುಗಳಾಗಿ ಚಂದ್ರಶೇಖರ ಕಲಾಲ, ರಮೇಶ ಇಂಗಳಗಿ, ಪರಶುರಾಮ ಚೌಡಕೇರ, ಎಂ.ವ್ಹಿ.ಬಿಳೇಭಾವಿ, ಎಸ್.ಆರ್.ಪಾಟೀಲ, ರೂಪರಾಣಿ ಪಟೆಗಾರ, ನರಸಮ್ಮ ಗುಬಚಿ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR